# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 61 TUESDAY 12-05-2026 PRGI No : KNKAN/26/A0962 Pages:4 Rs.2.00 M: 9742418836


## ಜಾತ್ಯಾತೀತ ಶಕ್ತಿಯನ್ನು ಒಗ್ಗೂಡಿಸಿ ಬದ್ಧತೆ ಮೆರೆಯಲು ತಮಿಳು ನಾಡಿನಲ್ಲಿ ಕಾಂಗ್ರೆಸ್ ಟಿವಿಕೆಗೆ ಬೆಂಬಲ: ಡಿ ಕೆ ಶಿವಕುಮಾರ್



ಪುದುಚೆರಿಯ ಕಾರೈಕಲ್ ಜಿಲ್ಲೆಯ ತಿರುನಲ್ಲರ್ ಶನೀಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ರಾಜಕೀಯದಲ್ಲಿ ಧರ್ಮನಿರಪೇಕ್ಷ ಶಕ್ತಿಗಳ ಏಕತೆ ಅತ್ಯಂತ ಅಗತ್ಯವೆಂದು ಹೇಳಿದ್ದಾರೆ.

ದೇವರ ದರ್ಶನ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ನಾನು ಶನೇಶ್ವರನ ಆಶೀರ್ವಾದ ಪಡೆಯಲು ಇಲ್ಲಿ ಬಂದಿದ್ದೇನೆ. ಅನೇಕ ವರ್ಷಗಳಿಂದ ದುಷ್ಟ ಶಕ್ತಿಗಳಿಂದ ರಕ್ಷಣೆಗಾಗಿ ನಾನು ಇಲ್ಲಿ ಬರುತ್ತಿದ್ದೇನೆ. ಆದ್ದರಿಂದ ಇದು ಸರಿಯಾದ ಸಮಯವೆಂದು ಭಾವಿಸಿ ಪೂಜೆ ಸಲ್ಲಿಸಿದೆ. ರಾಜ್ಯ, ದೇಶ ಮತ್ತು ಎಲ್ಲೆಡೆ ಸಮೃದ್ಧಿ ಇರಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ತಮಿಳುನಾಡಿನ ರಾಜಕೀಯ ಸ್ಥಿತಿಗತಿ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಈಗಾಗಲೇ ತನ್ನ ಬದ್ಧತೆಯನ್ನು ತಿಳಿಸಿದೆ; ಧರ್ಮನಿರಪೇಕ್ಷ ಶಕ್ತಿಗಳು ಒಗ್ಗೂಡಬೇಕು ಎಂಬುದೇ ಅವರ ಉದ್ದೇಶ, ಪ್ರಜಾಪ್ರಭುತ್ವ ಸರಿಯಾಗಿ ಪುನಃ ಸ್ಥಾಪನೆಯಾಗಬೇಕು ಎಂದು ಹೇಳಿದರು.

ನಮ್ಮ ಪಕ್ಷ ತೆಗೆದುಕೊಂಡಿರುವ ಯಾವುದೇ ನಿರ್ಧಾರವೂ ಬಿಜೆಪಿಯನ್ನು ಅಧಿಕಾರದಿಂದ ಹೊರಗಿಡುವ ಉದ್ದೇಶದಿಂದಲೇ. ನಮ್ಮ ಅಂತಿಮ ಗುರಿ ಧರ್ಮನಿರಪೇಕ್ಷ ಶಕ್ತಿಗಳನ್ನು ಒಗ್ಗೂಡಿಸುವುದು ಎಂದು ಹೇಳಿದರು.

ಟಿವಿಕೆ 108 ಸ್ಥಾನಗಳನ್ನು ಗೆದ್ದ ಬಳಿಕ, 234 ಸದಸ್ಯರ ವಿಧಾನಸಭೆಯಲ್ಲಿ 118ರ ಬಹುಮತ ಗಡಿಯನ್ನು ತಲುಪಲು ಸಣ್ಣ ಪಕ್ಷಗಳ ಬೆಂಬಲವನ್ನು ಕೇಳಿತ್ತು. ಕಾಂಗ್ರೆಸ್ (5 ಸ್ಥಾನ), ಸಿಪಿಐ (2) ಮತ್ತು ಸಿಪಿಎಂ (2) ಪಕ್ಷಗಳು ವಿಜಯ್ ನೇತೃತ್ವದ ಟಿವಿಕೆಗೆ ಬೆಂಬಲ ನೀಡಿದ್ದವು. ರಾಜ್ಯದಲ್ಲಿ ಬಿಜೆಪಿ ಕೇವಲ 3 ಸ್ಥಾನಗಳನ್ನು ಹೊಂದಿದೆ.

## ಸೇವೆ ಮತ್ತು ಆಧ್ಯಾತ್ಮಿಕತೆಯ ಹೆಮ್ಮರ "ಆರ್ಟ್ ಆಫ್ ಲಿವಿಂಗ್": ಪ್ರಧಾನಿ ಮೋದಿ

ಬೆಂಗಳೂರು: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬೆಂಗಳೂರಿನ ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನೂತನವಾಗಿ ನಿರ್ಮಿಸಲಾದ ಧ್ಯಾನ ಮಂದಿರ'ವನ್ನು ಭಾನುವಾರ ಉದ್ಘಾಟಿಸಿದ್ದಾರೆ.

ಸಂಸ್ಥೆಯ 45ನೇ ವಾರ್ಷಿಕೋತ್ಸವ ಮತ್ತು ಸಂಸ್ಥಾಪಕರಾದ ಶ್ರೀ ಶ್ರೀ ರವಿಶಂಕರ್ ಗುರೂಜಿ ಅವರ 70ನೇ ಜನ್ಮದಿನಾಚರಣೆಯ ಅಂಗವಾಗಿ ಈ ಕಾರ್ಯಕ್ರಮವನ್ನು ನಡೆಸಲಾಗಿದ್ದು, ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿಯವರು ಭಾಗಿಯಾಗಿದ್ದಾರೆ.

ಈ ಸಂದರ್ಭದಲ್ಲಿ ಮೋದಿಯವರು ಮಾನಸಿಕ ಆರೋಗ್ಯ, ಗ್ರಾಮೀಣಾಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ರಾಷ್ಟ್ರವ್ಯಾಪಿ ಸೇವಾ ಯೋಜನೆಗಳಿಗೂ ಚಾಲನೆ ನೀಡಿದ್ದಾರೆ.

ಬಳಿಕ ಮಾತನಾಡಿದ ಅವರು, ಬೆಂಗಳೂರು ಕೇವಲ ತಂತ್ರಜ್ಞಾನದ ನಗರವಲ್ಲ, ಇದು ಆಧ್ಯಾತ್ಮಿಕ ಚೇತನದ ಕೇಂದ್ರವೂ ಹೌದು ಎಂದು ಬಣ್ಣಿಸಿದರು.

'ಬೆಂಗಳೂರು ನಗರವು ವಿಶ್ವಕ್ಕೆ ಸಾಫ್ಟ್‌ವೇರ್ ಅನ್ನು ನೀಡುತ್ತಿದೆ. ಅದೇ ರೀತಿ ಆರ್ಟ್ ಆಫ್ ಲಿವಿಂಗ್ ಮೂಲಕ ವಿಶ್ವಕ್ಕೆ ಮಾನಸಿಕ ಶಾಂತಿಯ ಸಾಫ್ಟ್‌ವೇರ್ ಅನ್ನೂ ನೀಡುತ್ತಿದೆ. ಯೋಗ, ಧ್ಯಾನ ಮತ್ತು ಪ್ರಾಣಾಯಾಮಗಳು ಭಾರತದ ಸಂಸ್ಕಾರದ ಅವಿಭಾಜ್ಯ ಅಂಗಗಳಾಗಿದ್ದು, ಇವುಗಳನ್ನು ಜಾಗತಿಕ ಮಟ್ಟದಲ್ಲಿ ಜನಪ್ರಿಯಗೊಳಿಸುವಲ್ಲಿ ಈ ಸಂಸ್ಥೆಯ ಪಾತ್ರ ಹಿರಿದು' ಎಂದು ಮೆಚ್ಚುಗೆ ಸೂಚಿಸಿದರು.



ಮೋದಿಯುವರು, ಆಧ್ಯಾತ್ಮಿಕತೆ ಎಂದರೆ ಕೇವಲ ಧ್ಯಾನವಲ್ಲ, ಅದು ಸಮಾಜ ಸೇವೆಯನ್ನೂ ಒಳಗೊಂಡಿರಬೇಕು ಎಂಬ ಗುರೂಜಿಯವರ ತತ್ವವನ್ನು ಪ್ರಧಾನಿ ಶ್ಲಾಘಿಸಿದರು.

ನಮ್ಮಲ್ಲಿ ಸೇವೆ ಎನ್ನುವುದು ಪರಮ ಧರ್ಮ. ಪರೋಪಕಾರವೇ ಪುಣ್ಯ, ಪರಪೀಡನೆಯೇ ಪಾಪ. ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರತಿ ಕಾರ್ಯಕರ್ತನಲ್ಲೂ ಸೇವಾ ಭಾವನೆ ಎದ್ದು ಕಾಣುತ್ತಿದೆ. ಗುರೂಜಿ ಅವರು ಕಳೆದ 45 ವರ್ಷಗಳ ಹಿಂದೆ ಬಿತ್ತಿದ ಬೀಜ ಇಂದು ವಿಶಾಲವಾದ ಹೆಮ್ಮರವಾಗಿ ಬೆಳೆದು ನಿಂತಿದೆ. ಈ ವೃಕ್ಷದ ಸಾವಿರಾರು ಶಾಖೆಗಳು ಜಗತ್ತಿನಾದ್ಯಂತ ಲಕ್ಷಾಂತರ ಜನರ ಬದುಕನ್ನು ಸುಂದರಗೊಳಿಸುತ್ತಿವೆ.

ಭಾರತವು ಜಗತ್ತಿಗೆ ಶಾಂತಿ ಮತ್ತು ಮಾನಸಿಕ ನೆಮ್ಮದಿಯನ್ನು ನೀಡುವ ಸಾಮರ್ಥ್ಯ ಹೊಂದಿದೆ. ಯೋಗ ಮತ್ತು ಸುದರ್ಶನ ಕ್ರಿಯೆಯಂತಹ ಭಾರತೀಯ ಪ್ರಾಚೀನ ವಿದ್ಯೆಗಳನ್ನು 180ಕ್ಕೂ ಹೆಚ್ಚು ದೇಶಗಳಿಗೆ ತಲುಪಿಸುವ ಮೂಲಕ ಗುರೂಜಿಯವರು ಭಾರತವನ್ನು ಆಧ್ಯಾತ್ಮಿಕವಾಗಿ 'ವಿಶ್ವಗುರು' ಸ್ಥಾನದಲ್ಲಿ ನಿಲ್ಲಿಸಲು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಇದೇ ವೇಳೆ ಇಂದಿನ ಒತ್ತಡದ ಜಗತ್ತಿನಲ್ಲಿ ಆರ್ಟ್ ಆಫ್ ಲಿವಿಂಗ್ ನೀಡುತ್ತಿರುವ ಮಾನಸಿಕ ಆರೋಗ್ಯ ಸೇವೆಗಳನ್ನು ಪ್ರಧಾನಿ ಶ್ಲಾಘಿಸಿದರು.

ನೂತನವಾಗಿ ಉದ್ಘಾಟನೆಗೊಂಡ ಧ್ಯಾನ ಮಂದಿರವು ಲಕ್ಷಾಂತರ ಜನರಿಗೆ ಆಂತರಿಕ ಶಾಂತಿ ನೀಡುವ ಕೇಂದ್ರವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಭಾರತದ ವಸುಧೈವ ಕುಟುಂಬಕಂ (ಜಗತ್ತೇ ಒಂದು ಕುಟುಂಬ) ಎಂಬ ಸಂದೇಶವನ್ನು ಜಾಗತಿಕ ವೇದಿಕೆಯಲ್ಲಿ ಪ್ರಸಾರ ಮಾಡುತ್ತಿರುವ ಈ ಸಂಸ್ಥೆಯ ಕಾರ್ಯವನ್ನು ಮೋದಿ ಅವರು ರಾಷ್ಟ್ರೀಯ ಹೆಮ್ಮೆ ಎಂದು ಶ್ಲಾಘಿಸಿದರು.

## ಶ್ರೀ ವೇಮನ ಸೊಸೈಟಿಗೆ 3.06 ಕೋಟಿ ರೂ ಲಾಭ



ಮೂಡಲಗಿ: ಪಟ್ಟಣದ ಶ್ರೀ ವೇಮನ್ ಸೊಸೈಟಿಯ ಸಭಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಸೊಸೈಟಿ ಅಧ್ಯಕ್ಷ ಸಂತೋಷ ಸೋನವಾಲಕರ ಮಾತನಾಡಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ ಶ್ರೀ ವೇಮನ ಕೋ-ಆಪ್ ಕ್ರೆಡಿಟ್ ಸೊಸೈಟಿಗೆ 2025-26ನೇ ಹಣಕಾಸಿನ ವರ್ಷದ ಕೊನೆಯಲ್ಲಿ 3.06 ಕೊಟಿ ರೂ. ಲಾಭ ಗಳಿಸಿ ಪ್ರಗತಿಯಲ್ಲಿ ಸಾಗಿದೆ ಎಂದು ಸೊಸೈಟಿ ಅಧ್ಯಕ್ಷ ಸಂತೋಷ ಸೋನವಾಲಕರ ಅವರು ತಿಳಿಸಿದರು.

ಸೊಸೈಟಿಯ ಸಭಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸೊಸೈಟಿಯು ಈಗಾಗಲೇ 8 ಶಾಖೆಗಳನ್ನು ಹೊಂದಿದ್ದು, ಶೀಘ್ರದಲ್ಲಿ ಇನ್ನೂ 2 ಶಾಖೆಗಳನ್ನು ಪ್ರಾರಂಭಿಸಲಾಗುವದು, ಅಲ್ಲದೆ ಸಂಸ್ಥೆಯ ಬೆಳವಣಿಗೆಗೆ ಸಹಕರಿಸಿದ ಷೇರುದಾರರಿಗೆ ಶೇ.13 ರಷ್ಟು ಲಾಭಾಂಶ ನೀಡಲಾಗುವದು ಎಂದರು.

ಪ್ರಸಕ್ತ ವರ್ಷ ಸೊಸೈಟಿಯು 3.57 ಕೋಟಿ ರೂ. ಷೇರು ಬಂಡವಾಳ, 12.30 ಕೋಟಿ ರೂ. ನಿಧಿಗಳು, 183.62 ಕೋಟಿ ರೂ. ಠೇವುಗಳು, 78.13 ಕೋಟಿ ರೂ. ಗುಂತಾವಣಿ ಗಳನ್ನು ಹೊಂದಿದೆ. 7.57 ಕೋಟಿ ರೂ. ವಿವಿಧ' ಬ್ಯಾಂಕುಗಳಲ್ಲಿ ಠೇವು ಇಟ್ಟಿದೆ. ವಿವಿಧ ಕ್ಷೇತ್ರಗಳಿಗೆ 114.24 ಕೋಟಿ ರೂ. ಸಾಲ ನೀಡಿದೆ, 208.96 ಕೋಟಿ ರೂ.ದುಡಿಯುವ ಬಂಡವಾಳ ಹೊಂದಿ, 946.14 ಕೋಟಿ ವಾರ್ಷಿಕ ವಹಿವಾಟು ನಡೆಸಿದೆ ಎಂದರು.

ಈ ಸಂದರ್ಭದಲ್ಲಿ ಸೊಸೈಟಿಯ ಉಪಾಧ್ಯಕ್ಷ ಹನುಮಂತ ಪ್ಯಾಟಿಗೌಡರ, ನಿರ್ದೇಶಕರಾದ ವಿಜಯಕುಮಾರ ಸೋನವಾಲಕರ, ಪಾಂಡು ಸೋನವಾಲಕರ, ತಮ್ಮಣ್ಣಾ ಝುಂಡೆಕುರಬರ, ಹನುಮಂತ ದಂಡಪ್ಪನವರ, ಸಿದ್ದಪ್ಪ ಪೂಜೇರಿ, ಸಚೀನ ಸೋನವಾಲಕರ, ವಿಠಲ ಸಂತಿ, ಲತಾ ಸತರಡ್ಡಿ, ಲಕ್ಮೀಬಾಯಿ ಮಂಟನವರ, ರಾಮಪ್ಪ ಹಾದಿಮನಿ ಉಪಸ್ಥಿತರಿದ್ದರು.

ಪ್ರಧಾನ ವ್ಯವಸ್ಥಾಪಕ ಪರಶುರಾಮ ಕುಟರಟ್ಟಿ ಸ್ವಾಗತಿಸಿ, ವಂದಿಸಿದರು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಅಪ್ರತೀಮ ವೀರ, ಅದ್ವಿತೀಯ ಶೌರ್ಯ, ಪರಾಕ್ರಮಗಳ ಮೂಲಕ, ಸಂಸ್ಕೃತಿ, ಸ್ವಾಭಿಮಾನವನ್ನು ರಕ್ಷಿಸಿದ ಅಪ್ರತಿಮ ಹೋರಾಟಗಾರ ಮಹಾರಾಣಾ ಪ್ರತಾಪ್ ಸಿಂಗ್ ಜಯಂತಿ ನಿಮಿತ್ ಮಹಾರಾಣಾ ಪ್ರತಾಪ್ ಸಿಂಗ್ ಪ್ರತಿಮೆಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ನಮನಗಳನ್ನು ಸಲ್ಲಿಸಲಾಯಿತು. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಮಾಜಿ ಅಧ್ಯಕ್ಷ ಸದಾನಂದ ಡಂಗನವರ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ, ಸಾಹಿತಿ ಪ್ರೊ ಎಸ್.ಎಂ.ಸಾತ್ಮಾರ, ಉಪಾಧ್ಯಕ್ಷ ಚನ್ನಬಸಪ್ಪ ಧಾರವಾಡಶೆಟ್ಟರ, ರಾಜಣ್ಣ ಪವಾರ್ , ಶಂಕ್ರಪ್ಪ , ಮುಂತಾದವರು ಇದ್ದರು.

### ಶಿಂದಿಕುರಬೇಟ ಮಾಧ್ಯಮಿಕ ಶಾಲೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮ

## ಸಂಸ್ಕಾರ ಮತ್ತು ಸಂಸ್ಕೃತಿ ಮಕ್ಕಳಿಗೆ ಕಲಿಸುವುದು ಅಗತ್ಯವಾಗಿದೆ-ಸಾಂಗಲಿ

**ಬೆಳಗಾವಿ ವಾರ್ತೆ ಗೋಕಾಕ:** ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಪಾಲಕರು ಮಕ್ಕಳಿಗೆ ಕಲಿಸುವುದು ಅಗತ್ಯವಾಗಿದೆ ಎಂದು ನಿವೃತ್ತ ಮುಖ್ಯೋಪಾಧ್ಯಾಯ ಜಿ.ಎನ್.ಸಾಂಗಲಿ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಶಿಂದಿಕುರಬೇಟ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ ಸಮತಾ ಶಿಕ್ಷಣ ಸಮಿತಿಯ ಮಾಧ್ಯಮಿಕ ಶಾಲೆಯ ಎಸ್ ಎಸ್ ಎಲ್ ಸಿ ಸನ್ 1995/ 1996ಸಾಲಿನ ವಿದ್ಯಾರ್ಥಿಗಳ ಗುರು ವಂದನಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು ಪಾಲಕರು ತಮ್ಮ ಬದುಕಿನ ಜೊತೆಗೆ ಮಕ್ಕಳ ಬದುಕನ್ನು ರೂಪಿಸಿಕೊಳ್ಳಬೇಕು. ಶಿಕ್ಷಣ. ಸಂಸ್ಥೆಯು ತಮಗೆ ಒಳ್ಳೆಯ ಮೌಲ್ಯಗಳನ್ನು ನೀಡಿದೆ. ಭೂಮಿಗೆ ಬಿದ್ದ ಬೀಜ, ಎದೆಗೆ ಬಿದ್ದ ಅಕ್ಷರ ಯಾವತ್ತೂ ಕೈ ಬೀಡುವುದಿಲ್ಲ. ನಾವು ಸದಾ ಸಾಧಕರಾಗಬೇಕು. ಇಂದಿನ ಯುಗದಲ್ಲಿ ಮಕ್ಕಳಿಗೆ ಮೊಬೈಲ್ ಹಾಗೂ ಟಿ.ವಿ ಗಳಿಂದ ದೂರ ಉಳಿಯಲು ಪಾಲಕರು ಮುಂದಾಗಬೇಕು ಎಂದರಲ್ಲದೇ ಶಿಕ್ಷಣ ಸಂಸ್ಥೆ ಬೆಳೆದು ಬಂದ ದಾರಿಯನ್ನು ವಿವರಿಸಿದರು. ಸಮಾಜ ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ ನಾವು ಸಮಾಜಕ್ಕೆ ಏನು ಕೊಟ್ಟಿದ್ದೇನೆ ಎನ್ನುವುದು ಮುಖ್ಯ ಎಂದು ಹೇಳಿದರು.



ಗೋಕಾಕ: ತಾಲೂಕಿನ ಶಿಂದಿಕುರಬೇಟ ಗ್ರಾಮದ ಮಾಧ್ಯಮಿಕ ಶಾಲೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಸನ್ಮಾನಿಸುತ್ತಿರುವುದು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಪ್ರಧಾನಗುರು ಎಸ್.ಎನ್. ಉರಜಿಂಗಗೋಳ ಅವರು ಕಳೆದ 30 ವರ್ಷಗಳ ಹಿಂದೆ ನಮ್ಮ ಶಾಲೆಯಲ್ಲಿ ಶಿಕ್ಷಣ ಕಲಿತು, ಇಂದು ವಿದ್ಯೆ ಹಾಗೂ ಜ್ಞಾನ ನೀಡಿದ ಗುರುಗಳನ್ನು ಒಂದೇ ವೇದಿಕೆಯಲ್ಲಿ ಅವರನ್ನು ಅಭಿಮಾನ ಹಾಗೂ ಗೌರವದಿಂದ ಸನ್ಮಾನಿಸಿದ ಕ್ಷಣ ನಮ್ಮ ಜೀವನದಲ್ಲಿ ಎಂದೂ ಮರೆಯಲಾಗದ ಸಂಗತಿಯಾಗಿದೆ. ಈ ನಿಟ್ಟಿನಲ್ಲಿ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಅವರ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದು ಹೇಳಿದರು.

ವೇದಿಕೆ ಮೇಲೆ ಬಿ.ಎಂ.ಕಳಸನ್ನವರ, ಕೆ.ವಿ.ಕಡ್ಡಿ, ಆರ್,ವೈ.ಬೆಳಗಲಿ, ಆರ್.ಎಸ್.ಸೊಗಲಿ, ಎಫ್.ಜಿ.ಕರನಾಚಿ, ಎಂ.ಎಸ್.ಪಾಟೀಲ, ಸಿ.ಬಿ.ಡೂಗನವರ, ಎಂ.ಎಸ್.ಬೆಳಗಲಿ, ಪಿ.ಎಚ್.ಗೋಸಬಾಳ, ಆರ್.ಬಿ.ಕರೆಪ್ಪಗೋಳ, ವಿಠ್ಠಲ ಕರೋಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ತಮ್ಮ ಶಾಲೆಯ ದಿನಗಳನ್ನು ಸ್ಮರಿಸಿಕೊಂಡರು. ವಿದ್ಯೆ ಕಲಿಸಿದ ಮಾಧ್ಯಮಿಕ ಹಾಗೂ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿದರು. ಪ್ರಭಾಕರ ಕಾರ್ಯಾಗೋಳ ಸ್ವಾಗತಿಸಿದರು. ಪಂಚಾಕ್ಷರಿ ಪಂಚಯ್ಯನವರಮಠ ನಿರೂಪಿಸಿದರು. ಮಹಾಂತೇಶ ಪವಾರ್ ವಂದಿಸಿದರು.

## ಹೋಂ ಸ್ಟೇಗಳಿಗೆ ನೋಂದಣಿ ಕಡ್ಡಾಯ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ವೇಗವಾಗಿ ವಿಸ್ತರಿಸುತ್ತಿರುವ ಹಿನ್ನಲೆಯಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಹೋ ಸ್ಟೇ ಘಟಕಗಳನ್ನು ನಿಯಂತ್ರಿಸಿ, ಪ್ರವಾಸಿಗರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ವಸತಿ ವ್ಯವಸ್ಥೆ ಒದಗಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆಯು ಕಡ್ಡಾಯ ನೋಂದಣಿ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದಿದೆ.

ಇತ್ತೀಚಿನ ದಿನಗಳಲ್ಲಿ ಬಾದಾಮಿ, ಪಟ್ಟದಕಲ್ಲು, ಐಹೊಳೆ, ಕೂಡಲಸಂಗಮ ಸೇರಿದಂತೆ ವಿವಿಧ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವುದರಿಂದ ಅನೇಕ ಕಡೆಗಳಲ್ಲಿ ಅನುಮತಿ ಇಲ್ಲದೇ ಹೋಂ ಸ್ಟೇಗಳು ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ. ಇಂತಹ ಅನಧಿಕೃತ ಘಟಕಗಳು ಪ್ರವಾಸಿಗರ ಸುರಕ್ಷತೆ, ಸ್ವಚ್ಚತೆ, ಸರ್ಕಾರದ ನಿಯಮಗಳು ಹಾಗೂ ಸಾರ್ವಜನಿಕ ಶಾಂತಿ, ಸುವ್ಯವಸ್ಥೆಗೆ ಧಕ್ಕೆಯನ್ನುಂಟು ಮಾಡುವ ಸಾಧ್ಯತೆ ಇದೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಹೋಂ ಸ್ಟೇ ಮಾಲಿಕರು ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ಮಾರ್ಗಸೂಚಿಗಳ ಪ್ರಕಾರ ಕಡ್ಡಾಯವಾಗಿ ನೋಂದಣಿ ಪಡೆದು, ಕಾನೂನು ಬದ್ದವಾಗಿ ಕಾರ್ಯಾಚರಣೆ ಮಾಡಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಕಟ್ಟಡದ ಸುರಕ್ಷತೆ, ಸೌಲಭ್ಯಗಳು, ಅಗ್ನಿ ನಿಯಂತ್ರಣ ವ್ಯವಸ್ಥೆ, ಸ್ವಚ್ಚತೆ, ಕುಡಿಯುವ ನೀರು, ಶೌಚಾಲಯ, ಅತಿಥಿಗಳ ದಾಖಲೆ ಸಂಗ್ರಹಣೆ, ಪೊಲೀಸ್ ಪರಿಶೀಲನೆ ಸೇರಿದಂತೆ ಅನೇಕ ಅಂಶಗಳನ್ನು ಪರಿಶೀಲಿಸಲಾಗುತ್ತದೆ.

ಹೋಂ ಸ್ಟೇ ಮಾಲಿಕರು ತಮ್ಮ ಘಟಕಗಳನ್ನು ನೋಂದಾಯಿಸಿಕೊಳ್ಳಲು ಅಗತ್ಯ ದಾಖಲೆಗಳಾದ ಗುರುತಿನ ಪತ್ರ, ಆಸ್ತಿ ದಾಖಲೆಗಳು, ಕಟ್ಟಡ ಅನುಮತಿ, ಪೊಲೀಸ್ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಕೊಠಡಿ ಸಂ.137, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ವಿಳಾಸಕ್ಕೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಶ್ರಮಿಕವರ್ಗ ದೇಶದ ಅಭಿವೃದ್ಧಿ ಉನ್ನತಿಗೆ ಮುನ್ನುಡಿ: ನ್ಯಾ. ಮಹಾಂತೇಶ ಎಸ್. ದರಗದ

**ಬೆಳಗಾವಿ ವಾರ್ತೆ ಕೊಪ್ಪಳ:** ಶ್ರಮಿಕವರ್ಗ ದೇಶದ ಅಭಿವೃದ್ಧಿ ಉನ್ನತಿಗೆ ಮುನ್ನುಡಿಯಾಗಿದೆ ಎಂದು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಹೇಳಿದರು.

ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಕಾರ್ಮಿಕ ಇಲಾಖೆ ಹಾಗೂ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಸಂಘಗಳ ಸಹಯೋಗದಲ್ಲಿ ಇತ್ತೀಚೆಗೆ ಕಿನ್ನಾಳ ಗ್ರಾಮದ ಗ್ರಾಮದಲ್ಲಿರುವ ಹೆಚ್.ಹೆಚ್.ಪಿ. ಕಛೇರಿ ಆವರಣದಲ್ಲಿ ಹಮ್ಮಿಕೊಂಡಿದ್ದಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಅಂತರಾಷ್ಟೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ, ಹಿಂದೆ ಶರಣಾಧಿ ಪ್ರಮಥರು ವಾಣಿಗಳಂತೆ ಕಾಯಕದ ಮಹತ್ವವನ್ನು ಬಸವಣ್ಣನವರು ಕಾಯಕವೇ ಕೈಲಾಸ ಎಂದು ನುಡಿದು ಕಾಯಕದ ಮಹತ್ವವನ್ನು ಸಾರಿದ್ದಾರೆ. ಅದೇರೀತಿ 'ನೀನು ಅಧ್ಯಕ್ಷನಾಗಿರು, ಚಮ್ಮಾರನಾಗಿರು, ಕಮ್ಮಾನಾಗಿರು, ಏನೇ ಆಗಿದ್ದರೂ ಮೊದಲು ಶ್ರಮಯೋಗಿ ಆಗಿ ಕೆಲಸಗಾರನಾಗು, ಕಾರ್ಮಿಕನಾಗಿರು' ಎಂದು ಡಾ: ಬಿ.ಆರ್.ಅಂಬೇಡ್ಕರ್ ರವರು ಹೇಳಿದ್ದಾರೆ. ಹಾಗಾಗಿ ಶ್ರಮಿಕವರ್ಗ ದೇಶದ ಅಭಿವೃದ್ಧಿ ಉನ್ನತಿಗೆ ಮುನ್ನುಡಿ. ಹಾಗಾಗಿ ಕಾರ್ಮಿಕರನ್ನು ಶ್ರಮಯೋಗಿಗಳನ್ನು ಸನ್ಮಾನಿಸಿದರು. ಈ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಕೊಪ್ಪಳ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎ.ವಿ. ಕಣವಿ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಕಾರ್ಮಿಕರಿಗೆ ಮಂಡಳಿಯಿಂದ ಸಿಗುವ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಕಾರ್ಮಿಕರಿಗೆ ಅರಿವು ಮೂಡಿಸಿದರು.

ಕಿನ್ನಾಳ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ಅವರು ಕಿನ್ನಾಳ ಗ್ರಾಮದ ಎಳಿಗೆಗಾಗಿ ಸದಾ ಸಿದ್ದರಾಗಿರುತ್ತೆವೆ ಎಂದು ಅರಿವು ಮೂಡಿಸಿದರು.

ಕಲ್ಯಾಣ ಕರ್ನಾಟಕ ಜಿಲ್ಲೆಗಳ ನೋಂದಾಯಿತ ಕಾರ್ಮಿಕ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ರಮೇಶ ಘೋರ್ಪಡೆ ಅವರು ಮಾತನಾಡುತ್ತಾ, ಕಾರ್ಮಿಕ ಇಲಾಖೆಯಿಂದ ನಮ್ಮ ಕಾರ್ಮಿಕರಿಗೆ ಒಳ್ಳೆಯ ಕಾರ್ಯಕ್ರಮಗಳು ಸೌಲಭ್ಯಗಳನ್ನು ನೀಡುತ್ತಾ ಬರಲಾಗುತ್ತಿದೆ. ಇದರಿಂದ ನಮ್ಮ ಕಾರ್ಮಿಕರು ಉತ್ತಮ ಜೀವನ ಕಟ್ಟಿಕೊಳ್ಳಲು ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ ಅವರು ಮಾತನಾಡಿ, ಪಾಶ್ಚಿಮಾತ್ಯ ದೇಶಗಳಲ್ಲಿ ಕಾರ್ಮಿಕರ ದಂಗೆಗಳು 1883 ರಲ್ಲಿ ಪ್ರಾರಂಭವಾದವು, ಚಿಕ್ಯಾಗೋದಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟವನ್ನು ಕೆಲಸದ ಅವಧಿ ನಿರ್ಧರಿಸುವ ಸಲುವಾಗಿ ಮತ್ತು ಅನೇಕ ಶೋಷಣೆಗಳ ವಿರುದ್ಧ ಪ್ರಾರಂಭಿಸಿದರು. 1886 ರಲ್ಲಿ 8 ಗಂಟೆಗಳ ಕೆಲಸದ ಅವಧಿಯನ್ನು ನಿರ್ಣಯಿಸಲಾದ ಪ್ರಯುಕ್ತ 1886ರ ಮೇ 1 ರಿಂದ ಜಾಗತಿಕ ಮಟ್ಟದಲ್ಲಿ ಅಂತರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಣೆ ಮಾಡುತ್ತಾ ಬದಲಾಯಿತು. ಭಾರತದಲ್ಲಿ 1937 ರಲ್ಲಿ ಚೆನ್ನೈನಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟದ ನೆನಪಿಗಾಗಿ ಭಾರತದಲ್ಲಿಯೂ ಕೂಡಾ ಕಾರ್ಮಿಕ ದಿನ ಆಚರಿಸುತ್ತಾ ಬರಲಾಯಿತು. ಈ ದಿನದಂದು ಕಾರ್ಮಿಕರ ಕುರಿತು ಕಾರ್ಯನಿರ್ವಹಿಸಿದ ಕಾರ್ಮಿಕ ಪ್ರತಿನಿಧಿ ಸಂಘಟನೆಗಳು, ಸಂಘಸಂಸ್ಥೆಗಳನ್ನು ಗುರುತಿಸಿ ಪ್ರೋತ್ಸಾಹ ನೀಡಲು ಆಚರಿಸುತ್ತಾ ಬರುತ್ತಿದೆ ಎಂದು ಈ ದಿನ ಇತಿಹಾಸ ತಿಳಿಸುತ್ತಾ ಮುಂದುವರೆದು, ಕಾರ್ಮಿಕ ಇಲಾಖೆಯಲ್ಲಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಅಡಿ ಕಟ್ಟಡಕ್ಕೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುತ್ತಿರುವವರು ನೋಂದಣಿಯಾಗಲು, ನೋಂದಣಿ ಪೂರ್ವದ 12 ತಿಂಗಳಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ 90 ದಿನಗಳು ಕೆಲಸ ನಿರ್ವಹಿಸಿರಬೇಕು, 18 ರಿಂದ 60 ವರ್ಷದೊಳಗಿರಬೇಕು. ಉದ್ಯೋಗ ದೃಢೀಕರಣ ಪತ್ರ ಅರ್ಜಿದಾರ ಹಾಗೂ ಅವಲಂಬಿತರ ಆಧಾರಕಾರ್ಡ್ ಪ್ರತಿ, ಅರ್ಜಿದಾರರ ಬ್ಯಾಂಕ್ ಪಾಸ್‌ಬುಕ್ ಪ್ರತಿ, ಅರ್ಜಿದಾರರ ಆಧಾರ್‌ಕಾರ್ಡ್ಗೆ ಲಿಂಕ್ ಆಗಿರುವ ದೂರವಾಣಿ ಸಂಖ್ಯೆ, ಹೊಂದಿರಬೇಕೆಂದು ತಿಳಿಸಿದರು ಹಾಗೂ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ನೀಡಲಾಗುವ ಸೌಲಭ್ಯಗಳಾದ, ಮದುವೆ ಧನಸಹಾಯ, ಹೆರಿಗೆ ಧನಸಹಾಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಧನಸಹಾಯ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯಧನ, ತಾಯಿ ಮಗು ಸಹಾಯ ಹಸ್ತ, ಪಿಂಚಣಿ ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ. ಈ ಸೌಲಭ್ಯಗಳನ್ನು ಪಡೆಯಲು ಅರ್ಹ ಫಲಾನುಭವಿಗಳು ಕಾಲ ಕಾಲಕ್ಕೆ ಗುರುತಿನಚೀಟಯ ನವೀಕರಣವನ್ನು ಮಾಡಿಸುವುದು ಕಡ್ಡಾಯವಾಗಿರುತ್ತದೆ ಎಂದರು ಹಾಗೂ ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿ ಅಡಿ ಸಿಗುವ ಸೌಲಭ್ಯಗಳ ಕುರಿತು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ಕಾರ್ಮಿಕ ಇಲಾಖೆಯ ಕ್ಷೇತ್ರ ನಿರ್ವಾಹಕರಾದ ಹೇಮಂತ್‌ಸಿಂಗ್, ಮುಖಂಡರಾದ ವಿರೇಶ ತಾವರಗೇರಾ, ಕಿನ್ನಾಳದ ಶ್ರೀ ಸಿದ್ದರಾಮೇಶ್ವರ ಬಾರ ಬೇಡಿಂಗ್ ಮತ್ತು ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷರಾದ ಉಮೇಶ ಬಡಿಗೇರ, ಮಾಜಿ ಅಧ್ಯಕ್ಷರಾದ ಬಸವರಾಜ ಚಿಲವಾಡಗಿ, ಬಹದ್ದೂರ ಬಂಡಿ ಕಾರ್ಮಿಕ ಸಂಘದ ಅಧ್ಯಕ್ಷರಾದ ಮಹಿಬೂಬ ಮಣ್ಣೂರ ಸೇರಿದಂತೆ ಕೊಪ್ಪಳ ತಾಲೂಕಿನ ವಿವಿಧ ಸಂಘಟನೆಯ ಪದಾಧಿಕಾರಿಗಳು, ಕಾರ್ಮಿಕರು ಉಪಸ್ಥಿತರಿದ್ದರು.

# ನಿಜವಾದ ಭಾಷೆ ಚಲನೆಯಲ್ಲಿರುತ್ತೆ : ಅಮರೇಶ ನುಗಡೋಣಿ




**ಬೆಳಗಾವಿ ವಾರ್ತೆ ಬಳ್ಳಾರಿ:** ಭಾಷೆ ಎನ್ನುವುದು ನಮ್ಮಲ್ಲಿ ಇರುವುದಿಲ್ಲ.ಅದು ನಮ್ಮ ಸುತ್ತಲಿನ ಚಲನೆಯಲ್ಲಿ ಜೀವಂತವಾಗಿರುತ್ತದೆ. ನಾನು ನೋಡಿದ ಪ್ರಸಂಗ ಗ್ರಹಿಸಿ ಅದಕ್ಕೆ ಒಂದು ತಾತ್ವಿಕ ಚೌಕಟ್ಟನ್ನು ಹಾಕಿಕೊಂಡು ಕಥೆಗಳನ್ನು ಬರೆಯುತ್ತೇನೆ ಎಂದು 2025ರ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಕಥೆಗಾರ ಅಮರೇಶ ನುಗುಡೋಣಿ ಅಭಿಪ್ರಾಯ ಪಟ್ಟರು.

ಅವರು ನಿನ್ನೆ ನಗರದ ಜ್ಞಾನಾಮೃತ ಕಾಲೇಜಿನಲ್ಲಿ ಸಂಗಂ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಪ್ರಶಸ್ತಿ ಪುರಸ್ಕಾರ ಪ್ರದಾನ ಸಮಾರಂಭದ ಸಂ ವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಲೋಕ ದೃಷ್ಠಿ ಎನ್ನುವುದು ನನ್ನ ಕಥೆಗಳಿಗೆ ಒಂದೊಂದು ಸಲ ನಾನು ಓದುವ ಕವಿತೆ, ವೈಚಾರಿಕ ಲೇಖನ, ಮಾತುಕತೆಯಿಂದಲೂ ಸಿಕ್ಕಿದೆ. ಪ್ರತಿ ಕಥೆಯಲ್ಲೂ ಒಂದು ತಾತ್ವಿಕತೆಯನ್ನು ವಿಸ್ತರಿಸುತ್ತ ಕಥೆಗಳನ್ನು ಕಟ್ಟಿರುವೆ. ಆರಂಭದಲ್ಲಿ ನನ್ನ ಓದಿಗೆ ದಕ್ಕಿದ ಕುವೆಂಪು ಅವರ ಮಲೆಗಳಲ್ಲಿ ಮದುಮಗಳು ಓದಿದಾಗ ಇಂತಹ ಬದುಕು ನನ್ನ ಪರಿಸರದಲ್ಲೂ ಇದೆ. ನಾನೇಕೆ ಬರೆಯಬಾರದು ಎನ್ನುವ ಒಳತುಡಿತ ಕಾಡಿ ಕಥೆಗಳನ್ನು ಬರೆಯಲು ತೊಡಗಿದೆ ಎಂದು ತಮ್ಮ ಕಥೆಗಳ ಯಾನವನ್ನು ನೆನಪಿಸಿಕೊಂಡರು.

ಈ ಹೊತ್ತು ಬರೆಯುತ್ತಿರುವ ಹೊಸ ತಲೆಮಾರಿನ ಕತೆಗಾರರಲ್ಲಿ ಧ್ಯಾನಸ್ಥ ಸ್ಥಿತಿ ಕಡಿಮೆ ಇದೆ. ಕಲಾತ್ಮಕವಾಗಿ ಬರೆಯುವವರು ಸಂಖ್ಯೆ ಕಡಿಮೆ ಇದೆ. ಕನ್ನಡ ಸಾಹಿತ್ಯ ಪರಂಪರೆಯನ್ನು ಗಮನಿಸಿದರೆ ಕೂಡುದನಿ ಇರುವುದು ಗಮನಕ್ಕೆ ಬರುತ್ತದೆ. ಇಂದಿನ ಕೇಡುಗಾಲದಲ್ಲಿ ಒಂಟಿದನಿಯೇ ಮುನ್ನೆಲೆಗೆ ಬರುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಗೋಷ್ಠಿಯ ಸಮನ್ವಯಕಾರರಾಗಿ ಪಲ್ಲವ ವೆಂಕಟೇಶ್ ನಡೆಸಿಕೊಟ್ಟರೆ, ಸಂವಾದದಲ್ಲಿ ಟಿ ಎಸ್ ಗೊರವರ ಚೈತ್ರಾ ಶಿವಯೋಗಿಮಠ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಓ ಎಲ್ ನಾಗಭೂಷಣ ಸ್ವಾಮಿ, ಜಿ ಪಿ ಬಸವರಾಜ್, ವೈ ಸಿ ಯೋಗಾನಂದ ರೆಡ್ಡಿ,ಅಬ್ದುಲ್ ತೋರಣಗಲ್, ಮಧುಸೂದನ ಕಾರಿಗನೂರು, ಪುಷ್ಪಲತಾ, ದಸ್ತಗೀರಸಾಬ್ ದಿನ್ನಿ, ಶಿವಲಿಂಗಪ್ಪ ಹಂದಿಹಾಳು, ವೀರೇಂದ್ರ ರಾವಿಹಾಳು, ನಾಗರಾಜ ಬಸರಕೋಡು,ವೀಣಾ ಆರ್, ಸದಾಶಿವ ಸೊರಟೂರು ಉಪಸ್ಥಿತರಿದ್ದರು.

# ತೋವಿವಿಯಲ್ಲಿ ಚಿಣ್ಣರ ಬೇಸಿಗೆ ಶಿಬಿರ

**ಬೆಳಗಾವಿ ವಾರ್ತೆ ಬಾಗಲಕೋಟೆ:** ತೋಟಗಾರಿಕೆ ವಿಸ್ತರಣಾ ಶಿಕ್ಷಣ ಸಂಸ್ಥೆ, ವಿಸ್ತರಣಾ ನಿರ್ದೇಶನಾಲಯ, ತೋವಿವಿ, ಬಾಗಲಕೋಟೆಯಲ್ಲಿ ಐದು ದಿನದ ಚಿಣ್ಣರ ತೋಟ-ಪಾಠ ಬೇಸಿಗೆ ಶಿಬಿರವನ್ನು ಮೇ 18 ರಿಂದ 22ವರೆಗೆ ಹಮ್ಮಿಕೊಳ್ಳಲಾಗಿದ್ದು, 7 ರಿಂದ 14 ವರ್ಷದ ಮಕ್ಕಳ ಪಾಲಕರು, ಪೋಷಕರು ಡಾ.ದೀಪಾ ತೇರದಾಳ (7899285785), ಹೇಮಾ ಹಾದಿಮನಿ (9019708340) ಇವರನ್ನು ಸಂಪರ್ಕಿಸಿ ತಮ್ಮ ಮಗುವಿನ ಹೆಸರನ್ನು ನೊಂದಾಯಿಸಿಕೊಳ್ಳಬೇಕು.

ನೋಂದಣಿ ಶುಲ್ಕ 500 ರೂ ಇದ್ದು, ಶಿಬಿರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ವರೆಗೆ ನಡೆಯಲಿದೆ ಎಂದು ತೋವಿವಿಯ ವಿಸ್ತರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಮ್ಮಟ ನಗರಿಗೆ ಬಂದ ವಿಶ್ವ ದಾಖಲೆ ಬರೆದ ಅತೀ ಚಿಕ್ಕ ಗಾತ್ರದ ಕುಬ್ಜ ಮಹಿಳೆ

**ಬೆಳಗಾವಿ ವಾರ್ತೆ ವಿಜಯಪುರ:** ಕೇವಲ 62.8 ಸೆಂಟಿಮೀಟರ್ ಉದ್ದವಿರುವ ಜಗತ್ತಿನ ಅತ್ಯಂತ ಕುಬ್ಜ ಮಹಿಳೆ ಎಂಬ ಕೀರ್ತಿಗೆ ಪಾತ್ರವಾಗಿರುವ ಜ್ಯೋತಿ ಆಮಗೆ ವಿಜಯಪುರಕ್ಕೆ ಭೇಟಿ ನೀಡಿದ್ದಾರೆ.



2011ರಲ್ಲಿ ಗಿನ್ನಿಸ್ ಸಂಸ್ಥೆ ಈ ವಿಶ್ವ ದಾಖಲೆಯನ್ನು ದಾಖಲಿಸಿ ಪ್ರಕಟಿಸಿತ್ತು. ಅವರು ಮಹಾರಾಷ್ಟ್ರದ ನಾಗ್ಪುರದಲ್ಲಿ ಜನಿಸಿದರು ಮತ್ತು ಅವರು ನಟಿಯಾಗಿಯೂ ಕೆಲಸ ಮಾಡುತ್ತಿದ್ದು, ಕೊರೊನಾ ವೈರಸ್ ವಿರುದ್ಧದ ಹೋರಾಟದಲ್ಲಿ ಪೊಲೀಸರಿಗೆ ಸಾಥ್ ನೀಡಿ ಮತ್ತು ಜನರಿಗೆಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು.

ಈ ಎಲ್ಲ ಅಪೂರ್ವ ಸಾಧನೆ ಮಾಡಿರುವ ಅವರು ವಿಜಯಪುರಕ್ಕೆ ಪ್ರಪ್ರಥಮ ಭೇಟಿ ನೀಡಿದರು.

ಈ ವೇಳೆ ವಿಜಯಪುರದ ಐತಿಹಾಸಿಕ ಗೋಳಗುಮ್ಮಟ, ಇಬ್ರಾಹಿಂ ರೋಜಾಸೇರಿದಂತೆ ಅನೇಕ ಐತಿಹಾಸಿಕ ಸ್ಥಳಗಳನ್ನು ಭೇಟಿ ನೀಡಿ ಸ್ಮಾರಕಗಳ ವೈಭವ ಕಂಡು ಆನಂದಿಸಿದರು.

# ರಾಣಾ ಪ್ರತಾಪಸಿಂಹರ ಇತಿಹಾಸ ಮಕ್ಕಳಿಗೆ ತಿಳಿಸಿ:ಜೈಸಿಂಗ್



**ಬೆಳಗಾವಿ ವಾರ್ತೆ ತಾಳಿಕೋಟೆ:** ಮೇವಾರದ ದೊರೆ ಮಹಾ ರಾಣಾ ಪ್ರತಾಪಸಿಂಹ ಸೂರ್ಯವಂಶಿ ರಾಜಪೂತರ ಸಿಸೋದಿಯ ವಂಶಕ್ಕೆ ಸೇರಿದವರು ಮಹಾವೀರ, ಪರಾಕ್ರಮಿ, ದೇಶಪ್ರೇಮಿಯಾದ ಇವರು ತಮ್ಮ ಇಡೀ ಜೀವನವನ್ನು ಧರ್ಮ ರಕ್ಷಣಾರ್ಥವಾಗಿ ಹೋರಾಡಿದ ದಿಮಂತ ರಾಜಪೂತರ ದೊರೆ ಎಂದು ಪುರಸಭೆ ಮಾಜಿ ಸದಸ್ಯ ಜೈಸಿಂಗ್ ಮೂಲಿಮನಿ ಅವರು ಹೇಳಿದರು.

ಶನಿವಾರರಂದು ಪಟ್ಟಣದ ರಜಪೂತ ಸಮಾಜದ ಶ್ರೀ ಅಂಬಾಭವಾನಿ ಮಂದಿರದಲ್ಲಿ ರಜಪೂತ ಸಮಾಜ ಮತ್ತು ಚೇತಕ್ ಸಂಘದ ಸಹಯೋಗದಲ್ಲಿ ಮಹಾ ರಾಣಾಪ್ರತಾಪಸಿಂಹ್ ಅವರ ಜಯಂತ್ಯೋತ್ಸವ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ರಾಣಾ ಉದಯ ಸಿಂಹನ ಮಗನಾಗಿ 1540ರ ಮೇ 9ರಂದು ಜನಿಸಿದ ಮಹಾರಾಣಾಪ್ರತಾಪಸಿಂಹ್ ಅವರು ತಂದೆ ಉದಯಸಿಂಹ ಅವರು ಮಡಿದಾಗ ಪ್ರತಾಪ ಸಿಂಹ ಕಮಲವಿರುವಿನಲ್ಲಿ ಪಟ್ಟಕ್ಕೆ ಬಂದು ತಂದೆಯ ಹೋರಾಟವನ್ನು ಮುಂದುವರಿಸಿದರು ರಾಜಸ್ಥಾನದ ಸಣ್ಣ-ದೊಡ್ಡ ದೊರೆಗಳು ಅಕ್ಬರನ ಪ್ರಚಂಡ ಸೈನ್ಯದ ಮುಂದೆ ನಿಲ್ಲಲಾರದೆ ಒಬ್ಬೊಬ್ಬರಾಗಿ ಸೋತು ಶರಣಾಗಿದ್ದರು. ಆದರೆ ಪ್ರತಾಪ ಸಿಂಹ ಸ್ವಾತಂತ್ರ ??ವನ್ನು ಕಳೆದುಕೊಂಡು ಮೊಗಲರ ಸ್ನೇಹ-ಹಸ್ತವನ್ನು ಸ್ವೀಕರಿಸಲು ಸಿದ್ಧನಿರಲಿಲ್ಲ ಪ್ರತಾಪ ಸಿಂಹ ಹೀಗೆ ಅನೇಕ ಕಷ್ಟಕಾರ್ಪಣ್ಯಗಳನ್ನು ಅನುಭವಿಸಿ ಕೈತಪ್ಪಿಹೋಗಿದ್ದ ಪ್ರದೇಶಗಳನ್ನು ವಶಪಡಿಸಿಕೊಂಡನು. ಮೊಘಲ್ ಭದ್ರಕೋಟೆಗಳ ಮೇಲೆ ದಾಳಿ ಮಾಡಲು ಪ್ರಾರಂಭಿಸಿದರು. 1583 ರ ಹೊತ್ತಿಗೆ ಅವರು ಪಶ್ಚಿಮ ಮೇವಾರ್ ಅನ್ನು ಯಶಸ್ವಿಯಾಗಿ ವಶಪಡಿಸಿಕೊಂಡರು, ಮೇವಾರದಲ್ಲಿ ಜನರ ಜೀವನ, ಆರ್ಥಿಕ ಸುಧಾರಣೆ, ಸಾಮಾಜಿಕ ಜೀವನ ಸುವ್ಯವಸ್ಥೆಯನ್ನು ಸ್ಥಾಪಿಸಿ ಶುಭದ್ರ ಆಡಳಿತ ನಡೆಸಿದನು. ಮೇವಾರ್‌ನಿಂದ ವಲಸೆ ಹೋಗಿದ್ದ ಜನರು ಈ ಸಮಯದಲ್ಲಿ ಹಿಂತಿರುಗಿ ಬಂದು ಸುಖ ಜೀವನ ನಡೆಸಲು ಪ್ರಾರಂಬಿಸಿದರು ಇಂತಹ ರಾಣಾ ಪ್ರತಾಪ್ ಸಿಂಹ ಅವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಂಡು ಸಾಗಬೇಕು ಮತ್ತು ಮಕ್ಕಳಿಗೆ ತಾಯಂದಿರರು ಇಂತಹ ಮಹಾನ್ ಪುರುಷರ ಕಥೆಗಳನ್ನು ಹೇಳುವಂತಹ ಕಾರ್ಯ ಮಾಡಬೇಕೆಂದರು. ಇದೇ ಸಮಯದಲ್ಲಿ ಮಹಾರಾಣಾ ಪ್ರತಾಪಸಿಂಹ್ ಅವರ ಭಾವಚಿತ್ರಕ್ಕೆ ಅರ್ಚಕರಾದ ವೇ.ಭೀಮಾಶಂಕರ ಜೋಶಿ ಮಹಾ ಪೂಜೆ ಸಲ್ಲಿಸಿದರು. ಸಮಾಜದ ಮುಖಂಡರು ಹಾಗೂ ಚೇತಕ ಸಂಘದ ಮುಖಂಡರು ಪುಷ್ಪಹಾರ ಹಾಕಿ ಗೌರವಿಸಿದರು.

ಈ ಸಮಯದಲ್ಲಿ ರಜಪೂತ ಸಮಾಜದ ಅಧ್ಯಕ್ಷರಾದ ಹರಿಸಿಂಗ್ ಮೂಲಿಮನಿ, ಮುಖಂಡರುಗಳಾದ ಗೋವಿಂದಸಿಂಗ್ ಮೂಲಿಮನಿ, ಭರತಸಿಂಗ್ ವಿಜಾಪೂರ, ರಮೇಶ ಗೌಡಗೇರಿ, ಮಾನಸಿಂಗ್ ಕೊಕಟನೂರ, ಜಗನ್ನಾಥಸಿಂಗ್ ದೇವಿ, ಉಪಸ್ಥಿತರಿದ್ದರು.

# ಜೀವನದ ಕಷ್ಟಗಳಿಗೆ ಬೆನ್ನೆಲುಬಾದ ತಾಯಿ ಅಕ್ಷಯ ಪಾತ್ರೆ ಇದ್ದಂತೆ: ಸಂತೋಷ ಬಂಡೆ

**ಬೆಳಗಾವಿ ವಾರ್ತೆ ವಿಜಯಪುರ:** ತಾಯಿ ಮಕ್ಕಳಿಗೆ ಒಂದು ನೈತಿಕ ಶಕ್ತಿ. ಇಂದಿನ ಆಧುನಿಕ ಯುಗದಲ್ಲಿ ಮಕ್ಕಳು ದಾರಿ ತಪ್ಪದಂತೆ, ಸಂಸ್ಕೃತಿ ಮತ್ತು ಆಧುನಿಕತೆಯ ನಡುವೆ ಸಮತೋಲನ ಕಾಪಾಡಲು ತಾಯಿ ಪಾತ್ರ ಅನನ್ಯವಾಗಿದ್ದು, ಅವಳು ಜೀವನದ ಕಷ್ಟಗಳಲ್ಲಿ ಬೆನ್ನೆಲುಬಾಗಿ ನಿಲ್ಲುವ ಅಕ್ಷಯ ಪಾತ್ರೆ ಇದ್ದಂತೆ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.




ರವಿವಾರ ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡ ವಿಶ್ವ ತಾಯಂದಿರ ದಿನದ ಕಾರ್ಯಕ್ರಮದಲ್ಲಿ 'ಆಧುನಿಕ ಜಗತ್ತಿನಲ್ಲಿ ತಾಯಿಯ ಪಾತ್ರ' ಕುರಿತು ಅವರು ಮಾತನಾಡಿದರು.

ತಾಯಿ ಎಂಬ ಪದದಲ್ಲಿ ಇಡೀ ವಿಶ್ವವೇ ಅಡಗಿದೆ. ತಾಯಿ, ಜಗತ್ತಿನಲ್ಲಿ ದೇವರ ಮತ್ತೊಂದು ರೂಪ, ನಮ್ಮ ದುಃಖ ತಗೊಂಡು ಪ್ರೀತಿ ಹಂಚುವವಳೇ ತಾಯಿ. ಸಮಾಜ ಮತ್ತು ಕುಟುಂಬದಲ್ಲಿ ತಾಯಿ ಬಹಳ ಮುಖ್ಯ. ಮಗುವಿನ ಸಮತೋಲಿತ ವ್ಯಕ್ತಿತ್ವ ನಿರ್ಮಾಣದಲ್ಲಿ ತಾಯಿ ಪಾತ್ರ ಬಹಳ ಮುಖ್ಯ ಎಂದರು.

ಇಂಡಿ ಎಸ್ ಬಿ ಐ ಬ್ಯಾಂಕ್ ಫೀಲ್ಡ್ ಆಫೀಸರ್ ಪ್ರಕಾಶ ಗುಜ್ಜಲವರ ಮಾತನಾಡಿ, ತಾಯಿಯು ಪ್ರೀತಿ, ತ್ಯಾಗ, ಕಾಳಜಿ ಮತ್ತು ಮಾರ್ಗದರ್ಶನದ ಸಾಕಾರಮೂರ್ತಿ. ಅವಳು ಮಗುವಿನ ಮೊದಲ ಗುರು, ಸ್ನೇಹಿತೆ, ದೇವತೆಯಾಗಿ ಜೀವನಪೂರ್ತಿ ಬೆನ್ನೆಲುಬಾಗಿದ್ದಾಳೆ. ತಾಯಿಯು ಮಗುವಿನ ಭಾವನಾತ್ಮಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುತ್ತಾಳೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಅಧ್ಯಕ್ಷತೆ ವಹಿಸಿ ಮಾತನಾಡಿ,'ಜನನಿ ಜನ್ಮಭೂಮಿಶ್ಚ ಸ್ವರ್ಗಾದಪಿ ಗರೀಯಸಿ' ಎನ್ನುವ ಮಾತಿದೆ. ಅಂದರೆ ಹೆತ್ತ ತಾಯಿ ಹೊತ್ತ ಭೂಮಿ ಸ್ವರ್ಗಕ್ಕಿಂತಲೂ ಮಿಗಿಲು ಎಂದು. ತಾಯಿಯ ತ್ಯಾಗ, ಆಕೆಯ ಪರಿಶುದ್ಧ, ನಿಶ್ಕಲ್ಮಶ ಪ್ರೀತಿಗೆ ಬೆಲೆ ಕಟ್ಟಲು ಅಸಾಧ್ಯ. ತಾಯಿ ಮಗುವಿನ ವ್ಯಕ್ತಿತ್ವ ರೂಪಿಸುವ ಅಡಿಪಾಯ ಎಂದು ಹೇಳಿದರು.

ಕಾರ್ಯದರ್ಶಿ ಸುನಂದಾ ಹುಣಶ್ಯಾಳ, ಶಿಕ್ಷಕರಾದ ರೇಣುಕಾ ಭಜಂತ್ರಿ,ವೀರೇಶ ಹುಣಶ್ಯಾಳ ಹಾಗೂ ಪಾಲಕರು, ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಮಕ್ಕಳು ತಾಯಿಯ ಮಹತ್ವ ಕುರಿತು ಭಿತ್ತಿಚಿತ್ರ ಪ್ರದರ್ಶಿಸಿದರು.

# ಸಿಐಆರ್ ಪೋರ್ಟಲ್ ಮೂಲಕ 27 ಮೊಬೈಲ್ ಪತ್ತೆವಾರಸುದಾರರಿಗೆ ಹಸ್ತಾಂತರಿಸಿದ ಜಮಖಂಡಿ ಶಹರ ಪೊಲೀಸರು



**ಬೆಳಗಾವಿ ವಾರ್ತೆ ಜಮಖಂಡಿ:** ನಗರದ ಶಹರ ಪೊಲೀಸ್ ಠಾಣೆಯ ಪೊಲೀಸರು ಸಾರ್ವಜನಿಕರ ಕಳೆದುಹೋಗಿದ್ದ ಮೊಬೈಲ್ ಫೋನಗಳನ್ನು ಪತ್ತೆಹಚ್ಚುವಲ್ಲಿ ಮಹತ್ವದ ಸಾಧನೆ ಮಾಡಿದ್ದು, ಸಿಐಆರ್ (Central Equipment Identity Register) ಪೋರ್ಟಲ್ ಸಹಾಯದಿಂದ ಒಟ್ಟು 27 ಮೊಬೈಲ್ ಫೋನಗಳನ್ನು ಪತ್ತೆಹಚ್ಚಿ ಅವುಗಳನ್ನು ಸಂಬಂಧಿಸಿದ ವಾರಸುದಾರರಿಗೆ ಹಸ್ತಾಂತರಿ ಸಿದರು.

ನಗರದ ಶಹರ ಪೊಲೀಸ್ ಠಾಣೆ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಪಿಐ ಮಲ್ಲಪ್ಪ ಮಡ್ಡಿ ಹಾಗೂ ಪಿಎಸ್‌ಐ ಅನೀಲ ಕುಂಬಾರ ಅವರ ನೇತೃತ್ವದಲ್ಲಿ ಸಾರ್ವಜನಿಕರಿಗೆ ಮೊಬೈಲ್‌ಗಳನ್ನು ವಿತರಿಸಲಾಯಿತು.

ವಿವಿಧ ಸ್ಥಳಗಳಲ್ಲಿ ಕಳೆದುಹೋಗಿದ್ದ ಹಾಗೂ ಕಳ್ಳತನವಾಗಿದ್ದ ಮೊಬೈಲ್‌ಗಳ ಕುರಿತು ಸಾರ್ವಜನಿಕರು ನೀಡಿದ್ದ ದೂರುಗಳ ಆಧಾರದ ಮೇಲೆ ಪೊಲೀಸರು ಸಿಐಆರ್ ಪೋರ್ಟಲ್ ಮೂಲಕ ತಾಂತ್ರಿಕ ಮಾಹಿತಿ ಸಂಗ್ರಹಿಸಿ ಮೊಬೈಲ್‌ಗಳನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾದರು.

# ಹೇಮರೆಡ್ಡಿ ಮಲ್ಲಮ್ಮ ಜಯಂತ್ಯೋತ್ಸವ



**ಬೆಳಗಾವಿ ವಾರ್ತೆ ನವಲಗುಂದ:** 'ಹೇಮರೆಡ್ಡಿ ಮಲ್ಲಮ್ಮ ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿದರು. ಕರುಣಾ ಮಯಿ ಹಾಗೂ ದಾಸೋಹಿಯಾ ಗಿದ್ದರು ಎಂದು ತಹಶೀಲ್ದಾರ ಸುಧೀರ್ ಸಾಹು ಕಾರ್ ಹೇಳಿದರು. ತಹಶೀಲ್ದಾರ ಕಚೇರಿ ಸಭಾಂಗಣದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಜಯಂತೊತ್ಸವ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದರು. 500 ವರ್ಷ ಕಳೆದರೂ ಮಲ್ಲಮ್ಮ ಜನರ ಮನದಲ್ಲಿ ಚಿರಸ್ಥಾಯಿ ಯಾಗಿದ್ದಾರೆ. ರೆಡ್ಡಿ ಕುಲದವರು ಮಲ್ಲಮ್ಮ ನನ್ನು ಇಂದಿಗೂ ಮಹಾತಾಯಿಯಂತೆ ಪೂಜಿಸುತ್ತಾರೆ' ಎಂದರು.

ಜಿಲ್ಲಾ ಕೆಡಿಪಿ ಸದಸ್ಯ ಆರ್ ಎಚ್ ಕೋನರಡ್ಡಿ ಮಾತನಾಡಿ 'ಮಲ್ಲಮ್ಮ ಹಲವಾರು ಪವಾಡ ಗಳನ್ನು ನಡೆಸಿರುವ ಬಗ್ಗೆ ಪುರಣಾದಲ್ಲಿ ಉಲ್ಲೇಖ ಇದೆ. ಸಂತ ಶಿಶುನಾಳ ಷರೀಫರು ಹೇಮರೆಡ್ಡಿ ಮಲ್ಲಮ್ಮನ ಕುರಿತು ಹಲವಾರು ಗೀತೆಗಳನ್ನು ರಚಿಸಿದ್ದಾರೆ. ಮಲ್ಲಮ್ಮನ ಜೀವನದ ತತ್ವ, ಚಿಂತನೆಗಳು ಎಲ್ಲರಿಗೂ ಆದರ್ಶನೀಯ' ಎಂದರು.

ಗಣೇಶ ಚಳ್ಳಕೆರೆ, ರವೀಂದ್ರಗೌಡ ಪಾಟೀಲ,ನಾಗರಾಜ ಕರಿಸಕ್ರಣ್ಣವರ ರಡ್ಡಿ ಸಮಾಜದ ತಾಲ್ಲೂಕು ಅಧ್ಯಕ್ಷ ಗೋವಿಂದರಡ್ಡಿ ನಡುವಿನಮನಿ, ಕಲ್ಲಪ್ಪ ಹುಬ್ಬಳ್ಳಿ, ಎಚ್ ಎನ್ ಲಿಂಗರಡ್ಡಿ, ಪಾಂಡಪ್ಪ ಚವಣ್ಣವರ, ಕೃಷ್ಣರಡ್ಡಿ ಕುರಹಟ್ಟಿ ಸೇರಿ ಸಮಾಜದ ಪ್ರಮುಖರು, ಅಧಿಕಾರಿ ಗಳು, ಸಿಬ್ಬಂದಿಗಳು ಭಾಗವಹಿಸಿದ್ದರು.

# ಧರ್ಮದ ಬುತ್ತಿ ಜಾಥಾ

**ಬೆಳಗಾವಿ ವಾರ್ತೆ ನವಲಗುಂದ:** ಒಂದೇ ಕಟುಂಬದವರು ಜತೆಗಿ ಕುಳಿತು ಊಟ ಮಾಡಲು ಪುರುಸೊತ್ತಿಲ್ಲದ ಈ ದಿನಗಳಲ್ಲಿ ತಾಲ್ಲೂಕಿನ ಭಕ್ತ ಸಮೂಹವೆಲ್ಲ ಸೇರಿ ಧರ್ಮದ ಬುತ್ತಿ ಹೆಸರಿನಲ್ಲಿ ಜಾತಿ,ಮತಗಳನ್ನು ಮೀರಿ ಎಲ್ಲರೂ ಒಂದಾಗಿ ಹಿರೇಮಠಕ್ಕೆ ಬುತ್ತಿಯನ್ನು ಹೊತ್ತು ತರುವ ಮೂಲಕ ಸಾಮರಸ್ಯಕ್ಕೆ ಸಾಕ್ಷಿಯಾಗಿದ್ದೀರಿ ಎಂದು ಮಣಕವಾಡ ದೇವಮಂದಿರದ ಶ್ರೀ ಅಭಿನವ ಮೃತ್ಯುಂಜಯ ಸ್ವಾಮಿಜಿ ಹೇಳಿದರು.



ಭಾನುವಾರ ಸಂಜೆ ಪಂಚಗ್ರಹ ಹಿರೇಮಠದ ನೂತನ ಪೀಠಾಧಿಕಾರ ಹಾಗೂ ಗುರು ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಆಯೋಜಿಸಿದ್ದ ಧರ್ಮದ ಬುತ್ತಿ ಜಾಥಾ ಉದ್ಘಾಟಿಸಿ ಮಾತನಾಡಿದ ಅವರು ಹಿರೇಮಠದ ನೂತನ ಪಟ್ಟಾಧಿಕಾರ ಮಹೋತ್ಸವ ನಿಮಿತ್ತ ತಾಲೂಕಿನ ಸಾವಿರಾರು ಮಹಿಳೆಯರು ರಾತ್ರಿ ಪೂರ್ತಿ ಸೆಂಗಾ ಹೋಳಿಗೆ,ರೊಟ್ಟಿ ಬುತ್ತಿ ಮಾಡಿಕೊಂಡು ಬಿಸಿಲನ್ನು ಲೆಕ್ಕಿಸದೇ ಬೃಹತ್ ಜಾಥಾದಲ್ಲಿ ಪಾಲ್ಗೊಳ್ಳುವ ಮೂಲಕ ಆಧ್ಯಾತ್ಮ ಚಿಂತನೆಗೆ ಆದ್ಯತೆ ನೀಡಿರುವುದು ನವಲಗುಂದದ ಹೆಮ್ಮೆಯಾಗಿದೆ ಎಂದರು.

ಗವಿಮಠದ ಶ್ರೀ ಬಸವಲಿಂಗಸ್ವಾಮಿಜಿ ಮಾತನಾಡಿ ಈ ಹಿಂದೆ ನಡೆದ ಎಲ್ಲ ಮಠಗಳ ಪಟ್ಟಾಧಿಕಾರ ಮಹೋತ್ಸವ ಗಳನ್ನೂ ಮೀರಿಸುವಂತಹ ಧಾರ್ಮಿಕ ಕಾರ್ಯಗಳು ತಾಲೂಕಿನ ಎಲ್ಲ ಭಕ್ತರ ಸಹಕಾರದಿಂದ ಹಿರೇಮಠದಲ್ಲಿ ನಡೆದಿ ರುವುದು ಎಲ್ಲರನ್ನು ಭಕ್ತ ಸಾಗರ ದಲ್ಲಿ ಮಿಂದೇಳುವಂತೆ ಮಾಡಿದೆ ಎಂದರು.

ಶಾಸಕ ಎನ್.ಎಚ್.ಕೋನರಡ್ಡಿ ಹಾಗೂ ಮಾಜಿ ಸಚಿವ ಶಂಕರ ಪಾಟೀಲ್ ಮುನೇನಕೊಪ್ಪ ಮಾತನಾಡಿ ಪಟ್ಟಣ್‌ದಲ್ಲಿ ಹಿಂದೇದು ಕಾಣದಂತಹ ಬೃಹತ್ ಧಾರ್ಮಿಕ ಕಾರ್ಯಕ್ರಮ ಇದಾಗಿದ್ದು, ಸಾವಿರಾರು ಮಹಿಳೆಯರು ಧರ್ಮದ ಬುತ್ತಿಯನ್ನು ಹೊತ್ತು ಶ್ರೀಮಠಕ್ಕೆ ಮೆರ ವಣಿಗೆ ಮೂಲಕ ಬಂದು ಸಾವಿರಾರು ಭಕ್ತರಿಗೆ ಪ್ರಸಾದ ರೂಪದಲ್ಲಿ ಬುತ್ತಿಯನ್ನು ನೀಡಿದ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಇದಕ್ಕೂ ಮುನ್ನ ಶ್ರೀ ಶಂಕರ ಕಾಲೇಜು ಮೈದಾನದಲ್ಲಿ ಧರ್ಮದ ಬುತ್ತಿ ಜಾಥಾವನ್ನು ಪಂಚಗ್ರಹ ಹಿರೇಮಠದ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಜಿಯವರ ಸಾನ್ನಿಧ್ಯದಲ್ಲಿ ಮಣಕವಾಡ ಶ್ರೀ ಗವಿಮಠದ ಬಸವಲಿಂಗ ಸ್ವಾಮಿಜಿ,ನರಗುಂದ ಹಿರೇಮಠದ ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಜಿ, ನಿಯೋ ಜಿತ ಪೀಠಾಧಿಕಾರಿ ಶ್ರೀ ವೀರಬ ಸವ ಸ್ವಾಮಿಜಿ, ಶಾಸಕ ಎನ್.ಎಚ್. ಕೋ ನರಡ್ಡಿ.ಮಾಜಿ ಸಚಿವ ಶಂಕರ ಪಾಟೀಲ್ ಮುನೇನಕೊಪ್ಪ ಚಾಲನೆ ನೀಡಿದರು.

ಅಣ್ಣಪ್ಪ ಬಾಗಿ.ಪಾಂಡಪ್ಪ ಕೋನರಡ್ಡಿ, ಸಿದ್ದಲಿಂಗಯ್ಯ ಹಿರೇಮಠ,ಶಿವಾಜಿ ಕಲಾಲ,ಯಲ್ಲಪ್ಪ ಭೋವಿ, ಮಹೇಶ ಹಳ್ಳದ, ಬಾಬು ಹಳ್ಳದ,ಅಡಿವೆಪ್ಪ ಶಿರಸಂಗಿ ಸೇರಿದಂತೆ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

# ಹೇಮರೆಡ್ಡಿ ಮಲ್ಲಮ್ಮ ಜಯಂತಿ




**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕೇಂದ್ರ ಕಛೇರಿ, ಹುಬ್ಬಳ್ಳಿಯಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಯನ್ನು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ದೀಪ ಬೆಳಗಿಸುವುದರ ಮೂಲಕ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿಗಳಾದ ಶ್ರೀನಿವಾಸ ಮೂರ್ತಿ ಸಿ.ಇ. ರವರು ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮನವರ ಜೀವನ, ನುಡಿಗಳು ಹಾಗೂ ವಿಚಾರಧಾರೆಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಹೇಳಿದರು, ಜೊತೆಗೆ, ಅವರ ಕುಟುಂಬ ಪ್ರೀತಿ, ಭಕ್ತಿಭಾವ ಮತ್ತು ಆದರ್ಶ ಜೀವನಶೈಲಿ ಸಮಾಜಕ್ಕೆ ಮಾದರಿಯಾಗಿದ್ದು, ಅವುಗಳನ್ನು ನಾವು ಅನುಸರಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಸಹಾಯಕ ಭದ್ರತಾ ಮತ್ತು ಜಾಗ್ರತ ಅಧಿಕಾರಿಗಳಾದ ಜಗದೀಶ ಕೋಳಿ ರವರು ಹೇಮರೆಡ್ಡಿ ಮಲ್ಲಮ್ಮನವರ ಜೀವನದ ಕುರಿತು ಮಾತನಾಡಿ, ತಮ್ಮ ಭಕ್ತಿಪರತೆ, ತ್ಯಾಗ ಮತ್ತು ಸದ್ಗುಣಗಳಿಂದ ಇಡೀ ಸ್ತ್ರೀಕುಲಕ್ಕೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು. ಜೀವನದಲ್ಲಿ ಅನೇಕ ಕಷ್ಟಗಳನ್ನು ಅನುಭವಿಸಿದ್ದರೂ ಸಹ, ಅವರು ಸಮಾಜದ ಒಳತಿಗಾಗಿ ಆದರ್ಶ ಜೀವನ ನಡೆಸಿದ ರೀತಿ ಎಲ್ಲರಿಗೂ ಪ್ರೇರಣೆಯಾಗಿದ್ದು, ನಾವು ಸಹ ಸಮಾಜಮುಖಿ ಬದುಕನ್ನು ನಡೆಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಶ್ಯಾಮಲಾ ಕೆ.ಎನ್. ಮುಖ್ಯ ಕಾನೂನು ಅಧಿಕಾರಿ, ವಿ.ಎಫ್. ವಿಜಾಪುರ, ರವೀಂದ್ರ ಅವ್ವಣ್ಣವರ, ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ನಿರೂಪಿಸಿ, ವಂದಿಸಿದರು.

# ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ 2026–27ನೇ ಸಾಲಿನ ಬೀಳಗಿ ಎಸ್.ಆರ್.ನಿರಾಣಿ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನ ಡಿಪ್ಲೋಮಾ ಪ್ರವೇಶ ಕೋರ್ಸಗಳಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಪ್ರವೇಶ ಅವಧಿಯನ್ನು ವಿಸ್ತರಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸಿವಿಲ್ ಇಂಜಿನೀಯರಿಂಗ್, ಕಂಪ್ಯೂಟರ ಸೈನ್ಸ್, ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್, ಮೆಕ್ಯಾನಿಕಲ್ ಇಂಜಿನೀಯರಿಂಗ್, ಇಲೆಕ್ಟ್ರಿಕಲ್ & ಇಲೆಕ್ಟ್ರಾನಿಕ್ಸ್ ಇಂಜಿನೀಯರಿಂಗ್ ಹೀಗೆ ಒಟ್ಟು 6 ಕೋರ್ಸಗಳಿದ್ದು, ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಟ ಶೇ.35 ರಷ್ಟು ಅಂಕ ಪಡೆದು ಉತ್ತೀರ್ಣರಾದವರಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಮೂಲಕ ಪ್ರವೇಶ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊನಂ.9980230949, 8123326842, 7795489203ಗೆ ಸಂಪರ್ಕಿಸುವಂತೆ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರಾದ ಗೌಸ್ ಎಂ.ಸಾಲವತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ,16 ಮುಸ್ಲಿಂ ಸಮುದಾಯದ ಬೃಹತ್ ಸಮಾವೇಶ



**ಬೆಳಗಾವಿ ವಾರ್ತೆ ವಿಜಯಪುರ:** ನಮ್ಮ ಓಟಿನಿಂದ ನೀವು ಬಹುಮತ ಪಡೆದು ಅಧಿಕಾರ ಚುಕ್ಕಾಣಿ ಹಿಡಿದು 3 ವರ್ಷಗಳೇ ಕಳೆದಿದೆ ಅದರೆ ನಮಗೇನು ಕೊಟ್ಟಿರಿ ? ಎಂದು ಅಲ್ಪಸಂಖ್ಯಾತರು ಮೇ 16 ರಂದು ಬೆಂಗಳೂರಿನ ಪುರಭವನದ ಮುಂದೆ ರಾಜ್ಯ ಕಾಂಗ್ರೇಸ್ ಪಕ್ಷವನ್ನು ಪ್ರಶ್ನಿಸಲು ಮುಸ್ಲಿಂ ಸಮುದಾಯದ ಬೃಹತ್ ಸಮಾವೇಶವನ್ನು ಆಯೋಜಿಸಿದೆ.

ರಾಜ್ಯದಲ್ಲಿ ಮೊನ್ನೆ ನಡೆದ ದಾವಣಗೆರೆ ದಕ್ಷಿಣ ಕ್ಷೇತ್ರ ಹಾಗೂ ಬಾಗಲಕೋಟೆ ಕ್ಷೇತ್ರದ ಉಪಚುನಾವಣೆಯಲ್ಲಿ ಅಲ್ಪಸಂಖ್ಯಾತ ಸಮುದಾಯದ ನಾಯಕರು ಕಾಂಗ್ರೇಸ್ ಪಕ್ಷದ ಅಧಿಕೃತ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರ ಮಾಡಲಿಲ್ಲ , ಪಕ್ಷದ ವಿರೋಧ ಚಟುವಟಿಕೆಯಲ್ಲಿ ತೊಡಗಿಸಿ ಕೊಂಡಿದ್ದರು ಎಂಬ ಆರೋಪದ ಹಿನ್ನಲೆಯಲ್ಲಿ ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸ್ಸೀರ್ ಆಹಮದ್, ಹಾಗೂ ರಾಜ್ಯ ಕಾಂಗ್ರೇಸ್ ಪಕ್ಷದ ಆಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಅಬ್ದುಲ್ ಜಬ್ಬರ್ ಸೇರಿದಂತೆ ಅವರ ಸ್ಥಾನಮಾನಗಳಿಂದ ವಜಾಗೊಳಿಸಿದ್ದರು.

ಪಕ್ಷದ ನಿಯಮಾನುಸಾರ ಆರೋಪದ ನೋಟಿಸ್ ಜಾರಿ ಮಾಡದೆ ಅವರಿಂದ ಯಾವೂದೇ ಸ್ವಷ್ಟನೆ ಪಡೆಯಲು ಅವಕಾಶ ನೀಡದೆ ಏಕಾ ಏಕಿ ವಜಾ ಗೊಳಿಸಿರುವುದು ಆಲ್ಪಸಂಖ್ಯಾತ ಸಮುದಾಯದವರರಲ್ಲಿ ಅಸಮಾಧಾನ ಮುಗಿಲೆದ್ದಿದೆ. ಮತ್ತೊಂದು ಕಡೆ ಸಚಿವ ಜಮೀರ್ ಅವರಿಗೊ ಸಚಿವ ಸಂಪುಟದ ಪುನರ್ ರಚನೆಯಲ್ಲಿ ಕೈ ಬಿಡಲಾಗುವುದು ಎಂಬ ವಿಷಯವು ಕಾಂಗ್ರೇಸ್ ಪಕ್ಷದ ಪಡಸಾಲೆಯಲ್ಲಿ ಕೇಳಿ ಬರುತ್ತಿರುವ ಹಿನ್ನಲೆಯಲ್ಲಿ ಆಲ್ಪಸಂಖ್ಯಾತರು ತೀವ್ರ ಅಸಮಾಧಾನ ಹೊಂದಿದ್ದಾರೆ.

ಆಲ್ಪಸಂಖ್ಯಾತ ಸಮುದಾಯದ ಧರ್ಮಗುರುಗಳು ಸಹ ಮುಸ್ಲಿಂ ಸಮುದಾಯದವರಿಗೆ ಕಾಂಗ್ರೇಸ್ ಪಕ್ಷದಲ್ಲಿ ಸಾಮಾಜಿಕ ನ್ಯಾಯ ಸಿಗದೆ ವಂಚನೆಯಾಗಿದೆ . ಕೊಡಲೇ ಮೀಸಲಾತಿ ಪ್ರಕಾರ ಸಮುದಾಯದವರಿಗೆ ಸ್ಥಾನಮಾನಗಳು ಸಿಗದಿದ್ದಲ್ಲಿ ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಾಗುವುದು ಎಂಬ ಎಚ್ಚರಿಕೆಯ ಪಾಠದ ಸಂದೇಶವನ್ನು ರಾಜ್ಯದ ವಿವಿಧ ಪ್ರದೇಶಗಳಲ್ಲಿ ಸಂಚರಿಸಿ ಘೋಷಿಸಿದ್ದಾರೆ.

ಇದರ ಮುಂದುವರೆದ ಭಾಗವಾಗಿ ಬೆಂಗಳೂರಿನಲ್ಲಿ ಇದೇ 16 ರಂದು ಪುರಭವನದ ಮುಂದೆ ಬಹಿರಂಗ ಸಭೆಯನ್ನು ಆಯೋಜಿಸಲಾಗಿದ್ದು ಈ ಸಭೆಯಲ್ಲಿ ಮುಸ್ಲಿಂ ಸಮುದಾಯದವರು ತಮ್ಮ ಹಕ್ಕುಗಳು, ಸಮಾನತೆ ಹಾಗೂ ಮೀಸಲಾತಿಗೆ ಸಂಬಂಧಿಸಿದಂತೆ ಹಲವಾರು ವಿಷಯಗಳನ್ನು ಮಂಡಿಸುವ ಮೂಲಕ ಸಾಮಾಜಿಕ ನ್ಯಾಯವನ್ನು ಪ್ರಶ್ನಿಸಲಿದ್ದಾರೆ.ಇದರಿಂದ ಸರ್ಕಾರಕ್ಕೆ ಮುಸ್ಲಿಂ ಸಮುದಾಯಕ್ಕೆ ಅಗಿರುವ ಅನ್ಯಾಯಗಳು, ವಂಚನೆಗಳ ಬಗ್ಗೆ ಅರಿವು ಮೂಡಿಸುವ ಕೆಲಸವನ್ನು ಮಾಡಲಿದೆ.

ಸ್ವಾತಂತ್ರ್ಯ ಪೂರ್ವದಿಂದಲ್ಲೂ ಭಾರತದಲ್ಲಿ ಎಲ್ಲಾ ಹೋರಾಟಗಳಲ್ಲೂ ಹಾಗೂ ಕಾಂಗ್ರೇಸ್ ಪಕ್ಷದ ಸಂಘಟನೆಗೆ ಒತ್ತು ಬೆಂಬಲವನ್ನು ನೀಡುತ್ತಾ ಕಾಂಗ್ರೇಸ್ ಬೆನ್ನಲುಬು ಅಗಿ ಕಾರ್ಯನಿರ್ವಹಿಸುತ್ತಿರುವ ಕುರಿತು ಗಮನ ಸೆಳೆದು ಮುಸ್ಲಿಂ ಸಮುದಾಯಕ್ಕೆ ನೀಡ ಬೇಕಾಗಿರುವ ಅದ್ಯತೆಗಳ ಕುರಿತು ಕಾಂಗ್ರೇಸ್ ಪಕ್ಷಕ್ಕೆ ಜಾಗೃತೆ ಮೂಡಿಸಿ ಎಚ್ಚೆತ್ತು ಕೊಳ್ಳುವಂತೆ ಮಾಡಲಿದೆ.

ಅದರೂ ಸಹ ಕಾಂಗ್ರೇಸ್ ಪಕ್ಷವು ಮುಸ್ಲಿಂ ಸಮುದಾಯದ ಬೇಡಿಕೆಗಳು ಮತ್ತು ಹಕ್ಕುಗಳ ಬಗ್ಗೆ ಗಮನ ಹರಿಸದಿದ್ದಲ್ಲಿ ಮುಸ್ಲಿಂ ಸಮುದಾಯದಲ್ಲಿ ಕಾಂಗ್ರೇಸ್ ಪಕ್ಷವು ಕವಲು ಹಾದಿ ಹಿಡಿಯಲಿದೆ ಎಂಬುವುದು ಖಚಿತವಾಗಿದೆ. ಇದರಿಂದ ಕಾಂಗ್ರೇಸ್ ಪಕ್ಷಕ್ಕೆ ಮುಂದಿನ ಚುನಾವಣೆಗಳಲ್ಲಿ ಭಾರಿ ಹೊಡೆತ ಬೀಳಲಿದೆ ಎಂಬುವುದನ್ನು ಪ್ರತ್ಯೇಕವಾಗಿ ಹೇಳ ಬೇಕಾಗಿಲ್ಲ ಎಂಬುವುದು ಕೋಲಾರ ಮುಸ್ಲಿಂ ನಾಯಕರ ಹೇಳಿಕೆಯಾಗಿದೆ.

# ಮನಸ್ಸು ಪ್ರಶಾಂತವಾಗಿದ್ದಾಗ ಮಾತ್ರ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ

**ಬೆಳಗಾವಿ ವಾರ್ತೆ ಕಲಬುರಗಿ:** ಮನಸ್ಸು ಪ್ರಶಾಂತವಾಗಿದ್ದಾಗ ಮಾತ್ರ ಜೀ ವನದಲ್ಲಿ ಸಾಧನೆ ಮಾಡಲು ಸಾಧ್ಯವ ಾಗುತ್ತದೆ. ಮಾನಸಿಕ ಖಿನ್ನತೆಯಿಂದ ಬಳಲುತ್ತಿರುವ ವ್ಯಕ್ತಿಗಳು ಆಗಾಗ ಸಮಾಲೋಚಕರೊಡನೆ ಚರ್ಚಿಸಿ ತಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ವಿದ್ಯಾರ್ಥಿಗಳು ಜೀವನದಲ್ಲಿ ಗುರಿ ಇಟ್ಟುಕೊಂಡು ಧೈರ್ಯದಿಂದ, ಸಹನೆಯಿಂದ, ಸ್ವಾವಲಂಬಿಯಾಗಿ, ನೆಮ್ಮದಿಯಿಂದ ಬದುಕಬೇಕು. ಆಸಕ್ತಿ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಾ ತಮ್ಮ ತಮ್ಮ ಬದುಕನ್ನು ಸುಂದರಗೊ ಳಿಸಿಕೊಳ್ಳಬೇಕು ಖ್ಯಾತ ಮನೋವೈದ್ಯ, ಪದ್ಮಶ್ರೀ ಡಾ.ಸಿ.ಆರ್.ಚಂದ್ರಶೇಖರ್ ಹೇಳಿದರು.




ನಗರದ ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ 'ಸರ್ವಜ್ಞ ಕೌನ್ಸಿಲಿಂಗ್ ಸೆಂಟರ್'ನಲ್ಲಿ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಕುರಿತ ಪ್ರೇರಣಾ ಉಪನ್ಯಾಸ

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮನಸ್ಸು ಪ್ರಕ್ಷುಬ್ಧವಾಗಿರಲು ಕಾರಣವೆಂದರೆ ಸರಿಯಾಗಿ ನಿದ್ರೆ ಮಾಡದೇ ಇರುವುದು. ಪೌಷ್ಟಿಕ ಆಹಾರದ ಕೊರತೆ, ಹಣಕ ಾಸಿನ ಏರುಪೇರು, ಸಂಬಂ ಧಗಳಲ್ಲಿ ಒಡಕುಗಳು,ಉ ದ್ಯೋಗದ ಸಮಸ್ಯೆಗಳು ಇಂತಹ ಸಮಸ್ಯೆಗಳು ಬರಲು ಕಾರಣವೆಂದರೆ ನಮ್ಮಲ್ಲಿ ಇರುವ ಕೀಳರಿಮೆ, ನಕಾರಾತ್ಮಕ ಆಲೋಚನೆ, ಒಂಟಿತನ, ಬೇರೆಯವರ ಆಸರೆ ಇಲ್ಲದೆ ಇರುವಿಕೆ, ಜ್ಞಾನ ತಿಳುವಳಿಕೆ ಇಲ್ಲದಿ ರುವುದು. ಇಂತಹ ಸಂದರ್ಭದಲ್ಲಿ ನಮ್ಮ ಮನಸ್ಸು ಕೋಪ, ದುಃಖ, ಭಯ, ತಪ್ಪಿತಸ್ಥ ಭಾವನೆಯಿಂದ ಕೂಡಿ ರುತ್ತದೆ. ದೇಹದಲ್ಲಿ ಹಾರ್ಮೋನುಗಳು ಏರುಪೇರಾಗಿ ಚಿಂತಿಸುವುದರಿಂದ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಸಮಾಧಾನ ಇಲ್ಲದ ಮನಸ್ಸು ಇದ್ದರೆ ರಕ್ತದ ಒತ್ತಡ, ಹೃದಯಕ್ಕೆ ಸಂಬಂಧಪಟ್ಟ ಕಾಯಿಲ 'ಗಳು, ಶ್ವಾಸಕೋಶಗಳಲ್ಲಿ ಉಸಿರಾಟದ ತೊಂದರೆ, ಕೀಲುನೋವು ಕಾಣಿಸಿಕೊಳ್ಳುತ್ತವೆ. ಮಾನಸಿಕ ಆರೋಗ್ಯ ಹದಗೆಡಲು ಒತ್ತಡದ ಜೀವನ, ಚಿಂತೆ, ವೈಯಕ್ತಿಕ ಸಮಸ್ಯೆ, ಆರ್ಥಿಕ ಸಮಸ್ಯೆ ಮತ್ತು ಇತರ ಕಾರಣಗಳಿವೆ. ಎಲ್ಲಾ ವರ್ಗದ ಜನರು ತಮ್ಮ ಮಾನಸಿಕ ನೆಮ್ಮದಿ ಕಳೆದುಕೊಂಡು ಜೀವನ ಹಾಳು ಮಾಡಿಕೊಳ್ಳುತ್ತಿರುವುದು ವಿಷಾದನೀಯ ಎಂದರು. ಅಂಥವರಿಗೆ ಸಾಂತ್ವನ ಹೇಳುವ ಮೂಲಕ ಕೌನ್ಸಿಲಿಂಗ್ ಮಾಡುವ ಮೂಲಕ ಅವರ ಮಾನಸಿಕ ಆರೋಗ್ಯ ಉತ್ತಮವಾಗಿರುವಂತೆ ಮಾಡಬೇ ಕಾಗಿದೆ.

ವಿದ್ಯಾರ್ಥಿಗಳು ಅವಶ್ಯಕತೆಗಿಂತ ಹೆಚ್ಚಾಗಿ ಮೊಬೈಲ್ ಬಳಸಬಾರದು. ಮೊಬೈಲ್ ಆಪ್ತಮಿತ್ರ ಆದರೆ ಇಂದು ಅತಿಯಾದ ಬಳಕೆಯಿಂದ ಆಪ್ತ ಶತ್ರು ಆಗುತ್ತಿದೆ. ಮೊಬೈ???ನಲ್ಲಿ ಇಂಪಾದ ಸಂಗೀತ ಪ್ರವಚನ ಕೇಳಿ ಆನಂದಿಸಬೇಕು ಆದರೆ ಅತಿಬಳಕೆ ಅದು ಆರೋಗ್ಯಕ್ಕೆ ಮಾರಕವಾಗಿದೆ ಎಂದರು.

ಮನೋವಿಜ್ಞಾನ ವಿಭಾಗದ ನಿವೃತ್ತ ಪ್ರಾಧ್ಯಾಪಕ ಮತ್ತು ವಿದ್ಯಾರ್ಥಿಗಳ ಕೌನ್ಸಿಲರ್ ಡಾ.ಆರ್.ವೆಂಕಟರೆಡ್ಡಿ ಅವರು ಮಾತನಾಡುತ್ತ, ಆಪ್ತ ಸಲಹೆ ಇದು ಆತ್ಮೀಯವಾಗಿರುತ್ತದೆ. ಆಪ್ತ ಸಮಾಲೋಚಕರು ಯಾವುದೇ

ಪೂರ್ವಪರ ಪೂರ್ವಗ್ರಹವಿಲ್ಲದೆ ಸಲಹೆ ನೀಡುವರು. ಉತ್ತಮವಾದ ಓದುವ ವಿಧಾನ ಜೀವನ ಶೈಲಿ ನೆಮ್ಮದಿಯ ಬದುಕಿಗೆ ಬೇಕಾದ ಅಂಶಗಳನ್ನು ತಿಳಿಸುವರು. ಇದರಿಂದ ಮಕ್ಕಳಲ್ಲಿ ಹೊಸ ಆಲೋಚನೆಗಳು ಬಂದು ಸುಂದರ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ. ಕೌನ್ಸಿಲಿಂನಲ್ಲಿ ವ್ಯಕ್ತಿಗಳು ಸಮಾಜದಲ್ಲೇ ಜನರೊಂದಿಗೆ ಹೇಗೆ ವರ್ತಿಸಬೇಕೆಂದು ಸಲಹೆ ನೀಡುತ್ತಾರೆ. ವಿದ್ಯಾರ್ಥಿಗಳು ಯಾವ ಕೋರ್ಸ್ ಆಯ್ಕೆ ಮಾಡಿಕೊಳ್ಳ ಬೇಕೆಂಬುದರ ಕುರಿತು ಆಪ್ತಸಮಾಲೋಚಕರೊಡನೆ ಚರ್ಚಿಸಿ ಸಲಹೆ ಪಡೆದು ಚೆನ್ನಾಗಿ ಓದಿ ಸಂಭ್ರಮದಿಂದ ಪರೀಕ್ಷೆ ಬರೆದು ಯಶಸ್ವಿಯಾಗಬೇಕು. ನಂತರ ವೈಯಕ್ತಿಕ ಬದುಕಿನಲ್ಲಿ ಭಯ, ಆತಂಕ ಸಮಸ್ಯೆಗಳು ಎದುರಾದಾಗ ಮತ್ತು ವೃತ್ತಿ ಬದುಕಿನ ಆರಂಭದಲ್ಲಿ ವೃತ್ತಿ ಆಯ್ಕೆ ಮಾಡಿಕೊ ಳ್ಳುವಾಗ ಆಪ್ತ ಸಮಾಲೋಚಕರ ಸಲಹೆ ಪಡೆಯುವುದು ಸೂಕ್ತವಾಗಿದೆ ಎಂದು ಪ್ರೇರೇಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಸಂಸ್ಥಾಪಕರಾದ ಪ್ರೊ??. ಚನ್ನಾರಡ್ಡಿ ಪಾಟೀಲ್ ಅವರು ಮಾತನಾಡುತ್ತ, ಇಂದು ನಮ್ಮ ಸಂಸ್ಥೆಯಲ್ಲಿ ಕನ್ನಡ ಮಾಧ್ಯಮ ಸರಕಾರಿ ಶಾಲೆಯಲ್ಲಿ 10ನೇ ತರಗತಿ ಓದಿದ ಮಕ್ಕಳು ನಮ್ಮ ಕಾಲೇಜಿಗೆ ಬಂದು ಪಿಯುಸಿಯಲ್ಲಿ ಹೆಚ್ಚು ಅಂಕಗಳನ್ನು ರ್ಯಾಂಗಳನ್ನು ಪಡೆಯುವ ಮೂಲಕ ಸಾಧನೆ ಮಾಡುತ್ತಿದ್ದಾರೆ. ಇದಕ್ಕೆ ಕಾರಣ ಪದ್ಮಶ್ರೀ ಪುರಸ್ಕೃತರಾದ ಡಾ॥ ಸಿ. ಆರ್.ಚಂದ್ರಶೇಖರ್ ಖ್ಯಾತ ಮನೋವೈದ್ಯರು ಅವರು ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಾಸಕ್ಕಾಗಿ ನೀಡುತ್ತಿರುವ ಪ್ರೇರಣಾ ಉಪನ್ಯಾಸಗಳು, ವಿದ್ಯಾರ್ಥಿಗಳಿಗಾಗಿ ಮಾಡುತ್ತಿರುವ ಕೌನ್ಸಿಲಿಂ???ಗಳು ಮತ್ತು ನಾಡೋಜ ಗೌರವಾನ್ವಿತ ನ್ಯಾಯಮೂರ್ತಿ ಡಾ. ಶಿವರಾಜ ವಿ. ಪಾಟೀಲ ಅವರ ಜೀವನ ಅನುಭವದ ನುಡಿಮುತ್ತುಗಳು ಓದಿ ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳುತ್ತಿರುವುದರಿಂದ ಮತ್ತು ಶಿಕ್ಷಕರ ಉತ್ತಮ ಮಾರ್ಗದರ್ಶನದಿಂದ ಇದು ಸಾಧ್ಯವಾಗಿದೆ. ಮಕ್ಕಳು ಸಾಧನೆ ಮಾಡಬೇಕೆಂಬ ಗುರಿ ಛಲದೊಂದಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಿದ್ದಲ್ಲಿ ಆ ಸಾಧನೆಗೆ ಯಾವುದೇ ರೀತಿಯ ಸಮಸ್ಯೆಗಳು ಅಡ್ಡಿಯಾಗುವುದಿಲ್ಲ. ಸಮಸ್ಯೆಗಳ ಮಧ್ಯೆಯು ಉತ್ತಮ ಅಂಕಗಳ 'ೊಂದಿಗೆ ಸಮಾಜದಲ್ಲಿ ಸಮಸ್ಯೆಗಳು ಬಂದಾಗ ಎದುರಿಸುವ ಶಕ್ತಿ ಬೆಳಸಿಕೊಳ್ಳಬೇಕು.

ಶ್ರೇಷ್ಠ ಸಾಧಕರಾಗಿ ಉತ್ತಮ ನಾಗರಿಕರಾಗಿ ಹೊರ ಹೊಮ್ಮಬೇಕೆಂದು ಮಕ್ಕಳಿಗೆ ಪ್ರೊತ್ಸಾಹ ನೀಡಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಶ್ರೀ ಪ್ರಶಾಂತ್ ಕುಲಕರ್ಣಿ, ಶ್ರೀಮತಿ ವಿನುತ ಆರ್.ಬಿ., ಶ್ರೀ ಪ್ರಭುಗೌಡ ಸಿದ್ದಾರಡ್ಡಿ, ಶ್ರೀ ಪ್ರಭುದೇವ ಎಂ. ಎಸ್., ಶ್ರೀ ಕರುಣೇಶ್ ಹಿರೇಮಠ್, ಶ್ರೀ ಗುರುರಾಜ್ ಕುಲಕರ್ಣಿ, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬದ್ಧತೆಯಿಂದ ಕೆಲಸ ಮಾಡಿ ಸಕಾಲಕ್ಕೆ ಪ್ರಗತಿ ಸಾಧಿಸಿ:ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚನೆ



**ಬೆಳಗಾವಿ ವಾರ್ತೆ ವಿಜಯಪುರ :** ಯೋಜನೆಗಳಿಗೆ ಪೂರಕವಾಗಿ ಸಕಾಲಕ್ಕೆ ಕೆಲಸ ಮಾಡಿದರೆ ಯಾವುದೇ ಸಮಸ್ಯೆಗಳು ಬರುವುದಿಲ್ಲ. ಹಾಗಾಗಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯ ಸಾಧಿಸಿ ಕೆಲಸ ಮಾಡಿದರೆ ಎಲ್ಲ ಅಂಶಗಳಲ್ಲೂ ಪ್ರಗತಿ ಹೊಂದಲು ಸಾಧ್ಯ ಎಂದು ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಹೇಳಿದರು.

ಜಿಲ್ಲೆಯ ಮುದ್ದೇಬಿಹಾಳ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕುಗಳ ಮಹಾತ್ಮ ಗಾಂಧಿ ನರೇಗಾ ಯೋಜನೆ, ಗ್ರಾಮ ಪಂಚಾಯತಿ ತೆರಿಗೆ, ಗ್ರಂಥಾಲಯ, ತೆರಿಗೆ ವಸೂಲಾತಿ, ವಸತಿ, ಎಸ್.ಬಿ.ಎಮ್. ಅನುದಾನ ಪಾವತಿ, ಇ-ಹಾಜರಾತಿ, ಮಹಿಳಾ ಗ್ರಾಮ ಸಭೆ, ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಸಮಯಕ್ಕೆ ಸರಿಯಾಗಿ ಕಚೇರಿಗಳಿಗೆ ತೆರಳಿ, ಪ್ರಾಮಾಣಿಕವಾಗಿ ಕೆಲಸ ಮಾಡಿ ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಲಹೆ ನೀಡಿದರು.

ಎರಡು ತಾಲೂಕಿಗೆ ನಿಗದಿಪಡಿಸಿರುವ ಮಾನವ ದಿನಗಳನ್ನು ಮೇ ತಿಂಗಳ ಅಂತ್ಯದಲ್ಲಿ ಪೂರ್ಣಗೊಳಿಸಬೇಕು. ಪ್ರಸ್ತುತ ಹಾಗೂ ಬಾಕಿ ಉಳಿದ ನರೇಗಾ ಕೂಲಿಕಾರರ ಕೂಲಿಯನ್ನು ಸಕಾಲದಲ್ಲಿ ಪಾವತಿಸಬೇಕು. ಎಲ್ಲಾ ನರೇಗಾ ಕೂಲಿಕಾರರ ಇಕೆವೈಸಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದರು.

ನರೇಗಾ ಯೋಜನೆಯಡಿ ಅಪೂರ್ಣಗೊಂಡ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ನಮೂನೆ-6 ರಲ್ಲಿ ಬೇಡಿಕೆ ಸಲ್ಲಿಸಿದ ಎಲ್ಲಾ ಕೂಲಿಕಾರರಿಗೆ ಉದ್ಯೋಗ ಒದಗಿಸಬೇಕು. ವಿವಿಧ ಯೋಜನೆಗಳಲ್ಲಿ ನಿಗದಿತ ಪ್ರಗತಿ ಕುಂಠಿತಗೊಂಡಿರುವುದನ್ನು ಉಲ್ಲೇಖಿಸಿ ತ್ವರಿತವಾಗಿ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಪಂ ಸಹಾಯಕ ಯೋಜನಾಧಿಕಾರಿ ಅರುಣಕುಮಾರ ದಳವಾಯಿ, ಮುದ್ದೇಬಿಹಾಳ ತಾಪಂ ಇಒ ಸಂಗನಗೌಡ ತಾಳಿಕೋಟಿ, ತಾಪಂ ಇಒ ಅನುಸೂಯ ಚಲವಾದಿ ವೇದಿಕೆಯಲ್ಲಿದ್ದರು.

ಸಭೆಯಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಪಂ.) ಎಸ್.ಎಸ್.ಗಣಾಚಾರ್ಯ, ಪಿ.ಎಸ್. ಕಸನಕ್ಕಿ, ಸಹಾಯಕ ನಿರ್ದೇಶಕ (ಪಂ.ರಾ) ಮಲ್ಲಿಕಾರ್ಜುನ ಕೋರಿ, ಸಹಾಯಕ ಲೆಕ್ಕಾಧಿಕಾರಿ ವೀರೇಶ ಹೂಗಾರ, ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕಿನ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ತಾಂತ್ರಿಕ ಸಹಾಯಕರು, ಬೇರ್ ಫೂಟ್ ಟೆಕ್ನಿಶಿಯನ್ಸ್, ಗ್ರಾಮ ಕಾಯಕ ಮಿತ್ರರು, ತಾಲೂಕ ಪಂಚಾಯತ ನರೇಗಾ ಸಿಬ್ಬಂದಿ ಉಪಸ್ಥಿತರಿದ್ದರು.

## ನರೇಗಾ ಕಾಮಗಾರಿ ಸ್ಥಳಕ್ಕೆ ಪ್ರಕಾಶ ವಡ್ಡರ ಭೇಟಿ

**ಬೆಳಗಾವಿ ವಾರ್ತೆ ವಿಜಯಪುರ:** ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಗ್ರಾಮ ಪಂಚಾಂ ಯತಿ ವ್ಯಾಪ್ತಿಯ ಅರಳದಿನ್ನಿ ಗ್ರಾಮದ ಸಮೀಪ ಬಸಿಗಾಲುವೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ್ ಅವರು ಭೇಟಿ ನೀಡಿ ಪರಿಶೀಲಿಸಿದರು.



ಇದೇ ಸಂದರ್ಭದಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕರ ಮಸ್ಟರ್ ರೂಲ್ ಹಾಗೂ ಫೊ?ಟೊ ಆಧಾರಿತ ಹಾಜರಾತಿ ಪರಿಶೀಲಿಸಿದರು.

ಕೂಲಿಕಾರರೊಂದಿಗೆ ಸಂವಾದ ನಡೆಸಿದ ಅವರು, ಈ ಯೋಜನೆಯಡಿ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಹೂಳೆತ್ತುವ ಕಾಯಕದಲ್ಲಿ ಮಗ್ನರಾಗಿದ್ದ ಕೂಲಿಕಾರರು ತಮ್ಮ ಕೆಲಸದ ನಡುವೆಯೇ ಕೇಕ್ ಕತ್ತರಿಸಿ ಕಾರ್ಮಿಕ ದಿನವನ್ನು ಸಂಭ್ರಮದಿಂದ ಆಚರಿಸಿದರು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ಬಗ್ಗೆ ಪಿಡಿಒ ಹಾಗೂ ತಾಂತ್ರಿಕ ಇಂಜಿನಿಯರ್ ಗಳಿಂದ ಮಾಹಿತಿ ಪಡೆದ ಅವರು, ಬದು ನಿರ್ಮಾಣ, ಕೃಷಿ ಹೊಂಡಗಳಂಥ ವೈಯಕ್ತಿಕ ಕಾಮ ಗಾರಿಗಳ ಜತೆಗೆ ಸಾಮೂಹಿಕ ಕಾಮಗಾ ರಿಗಳಿಗೆ ಆದ್ಯತೆ ನೀಡುವಂತೆ ತಿಳಿಸಿದರು. ಬಳಿಕ ಮಾತನಾಡಿದ ಅವರು, ಕೂಲಿಕಾರರ ಹಾಜರಾತಿಯನ್ನು ಎನ್.ಎ ೦.ಎಂ.ಎಸ್ ಆಪ್ ಮುಖಾಂತರವೇ ಎರಡು ಬಾರಿ ಕಡ್ಡಾಯವಾಗಿ ತೆಗೆದುಕೊಳ್ಳಬೇಕು. ಬಿಸಿಲಿನ ತಾಪಮಾನ ಹೆಚ್ಚುತ್ತಿರುವುದರಿಂದ ಕೆಲಸಕ್ಕೆ ಬೇಗನೆ ಬರಬೇಕು. ನಿಮಗೆ ನೀಡಿರುವ ಅಳತೆ ಪ್ರಕಾರ ಕೆಲಸ ಮಾಡಬೇಕು ಎಂದು ಕೂಲಿಕಾರರಿಗೆ ಸೂಚಿಸಿದರು.

ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಾಕಷ್ಟು ಕೂಲಿಕಾರರು ಕೆಲಸಕ್ಕೆ ಬರುವವರಿಗೆ ಎನ್.ಎಂ.ಎಂ.ಎಸ್ ಆಪ್ ತೆಗೆದು ಉದ್ಯೋಗ ನೀಡುವಂತೆ ಪಿಡಿಒ ಅವರಿಗೆ ಸೂಚಿಸಿದರು.

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನಿರಂತರವಾಗಿ ಕೆಲಸ ಒದಗಿಸಲಾಗುತ್ತಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೂಲಿ ಕಾರ್ಮಿಕರಿಗೆ ತಿಳಿಸಿದರು.

ಈ ವೇಳೆ ಜಿಲ್ಲಾ ಪಂಚಾಯತಿ ಯೋಜನಾಧಿಕಾರಿ ಅರುಣಕುಮಾರ್ ದಳವಾಯಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ, ಪಿಡಿಒ ಜಿ.ಬಿ.ಕಲ್ಯಾಣಿ, ಕಾರ್ಯದರ್ಶಿ ರಮೇಶ ಉಪ್ಪನಸಿ, ತಾಲೂಕು ಐಇಸಿ ಸಂಯೋಜಕ ದಸ್ತಗೀರ ಗುಡಿಹಾಳ, ತಾಂತ್ರಿಕ ಸಹಾಯಕರಾದ ದಿಗಂಬರೇಶ ಪಾಟೀಲ, ಮಲಕಪ್ಪ ಕೊಳಮಲಿ, ಬಿಎಫ್ ಟಿ ವಿಠ್ಠಲ ಹರಳಯ್ಯ, ಬಿಲ್ ಕಲೆಕ್ಟರ್ ತಿಮ್ಮಣ್ಣ ವಡ್ಡರ್, ಡಿಇಒ ಜೈನಾಬಿ ಹಾಜರಿದ್ದರು.

## ಬಿಎಲ್ ಡಿಇ ಆಸ್ಪತ್ರೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆ

**ಬೆಳಗಾವಿ ವಾರ್ತೆ ವಿಜಯಪುರ:** ವಿಶ್ವಮಟ್ಟದ ವೈದ್ಯಕೀಯ ಸೇವೆಗಳನ್ನು ಉತ್ತರ ಕರ್ನಾಟಕ ಭಾಗದ ಜನತೆಗೆ ಒದಗಿಸುವ ಉದ್ದೇಶದಿಂದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಆಸ್ಪತ್ರೆಗೆ ಅಳವಡಿಸ 'ಲಾಗುತ್ತಿದೆ. ಈ ಹೊಸ 3ಆ ಮತ್ತು 4ಏ ಅನುಕೂಲ ಹೊಂದಿದ ವ್ಯವಸ್ಥೆಗಳು ವೈದ್ಯಕೀಯ ಶಿಕ್ಷಣ, ಸಂಶೋಧನೆ ಮತ್ತು ರೋಗಿ ಸೇವೆಯಲ್ಲಿ ಮಹತ್ತರ ಬದಲಾ ವಣೆ ತರಲಿವೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶುಕ್ರವಾರ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದಲ್ಲಿ ನೂತನವಾಗಿ ಅಳವಡಿಸಲಾಗಿರುವ ಅತ್ಯಾಧುನಿಕ ಲ್ಯಾಪ್ರೊಸ್ಕೋಪಿ ಮತ್ತು ಆರ್ಥ್ರೊಸ್ಕೋಪಿ ಯಂತ್ರಗಳನ್ನು ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಮತ್ತು ವೈದ್ಯಕೀಯ ತಜ್ಞರು, ಈ ತಂತ್ರಜ್ಞಾನದಿಂದ ರೋಗಿಗಳಿಗೆ ಇನ್ನಷ್ಟು ಗುಣಮಟ್ಟದ ಚಿಕಿತ್ಸೆ ಲಭ್ಯವಾಗಲಿದ್ದು, ಆಸ್ಪತ್ರೆಯ ಶಸ್ತ್ರಚಿಕಿತ್ಸೆ ಸೇವೆಗಳು ಮತ್ತಷ್ಟು ಬಲವಾಗಲಿವೆ ಎಂದು ಹೇಳಿದರು. ಈಗ ರಂಧ್ರಗಳ ಮೂಲಕ ಶಸ್ತ್ರಚಿಕಿತ್ಸೆ ನಡೆಸುವ ಎರಡು ಸೌಲಭ್ಯಗಳನ್ನು ಒದಗಿಸುವ ಮೂಲಕ ಮತ್ತೊಂದು ಮಹತ್ವದ ಆರೋಗ್ಯ ಸೇವೆ ಸೌಲಭ್ಯ ರೋಗಿಗಳಿಗೆ ಸಿಗಲಿದೆ ಎಂದು ಅವರು ಹೇಳಿದರು.



ಜನರಲ್ ಸರ್ಜರಿ ವಿಭಾಗಕ್ಕೆ ಅತ್ಯಾಧುನಿಕ ಕಾರ್ಲಸ್ಟೋರ್ಜ್ ರುಬಿನಾ ಲ್ಯಾಪ್ರೊಸ್ಕೋಪಿ ಸೆಟ್('Karl Storz Rubina Laparoscopy Set)ಗಾಲ್ ಬ್ಲಾಡರ್ ಚಿಕಿತ್ಸೆ, ಅಪೆಂಡಿಕ್ಸ್, ಹರ್ನಿಯಾ ಸೇರಿದಂತೆ ನಾನಾ ಜಟಿಲ ಶಸ್ತ್ರಚಿಕಿತ್ಸೆಗಳನ್ನು ಹೆಚ್ಚು ನಿಖರವಾಗಿ ನಡೆಸಲು ಅನುಕೂಲವಾಗಿದೆ. ಅಲ್ಲದೇ, ಆರ್ಥೊಸ್ಕೋಪಿಕ್ ಆಪರೇಶನಗಳಿಗೆ ಬಳಸಲಾಗುವ ಮತ್ತೊಂದು ಕೀಲುದರ್ಶಕ ಯಂತ್ರ(ಸ್ಟ್ರೈಕರ್ ಆರ್ಥೊಸ್ಕೋಪಿ) ಎಲುವು ಮತ್ತು ಕೀಲು ಸಂಬಂಧಿ ಸಮಸ್ಯೆಗಳನ್ನು ಎದುರಿಸುತ್ತಿರುವ ರೋಗಿಗಳಿಗೆ ವರದಾನವಾಗಲಿದೆದ. ಈ ತಂತ್ರತ್ರಜ್ಞಾನ ಬಳಕೆಯಿಂದ ರೋಗಿಗಳಿಗೆ ಕಡಿಮೆ ನೋವು, ಕಡಿಮೆ ರಕ್ತಸ್ರಾವ ಹಾಗೂ ವೇಗವಾದ ಚೇತರಿಕೆ ಸಾಧ್ಯವಾಗಲಿದೆ. ಗ್ರಾಮೀಣ ಹಾಗೂ ಬಡ ಜನರಿಗೆ ಅತ್ಯುತ್ತಮ ಆರೋಗ್ಯ ಸೇವೆ ತಲುಪಿಸಬೇಕು .

## ಮಾರ್ಕೆಟ್, ಲ್ಯಾನ್ಸಡೌನ್ ಬಿಲ್ಡಿಂಗ್ ನವೀಕರಣಗೊಳಿಸಿ



**ಬೆಳಗಾವಿ ವಾರ್ತೆ ಮೈಸೂರು:** ನಗರದ ಪಾರಂಪರಿಕ ಕಟ್ಟಡಗಳಾದ ದೇವರಾಜ ಮಾರುಕಟ್ಟೆ ಕಟ್ಟಡ ಮತ್ತು ಲ್ಯಾನ್ಸ್ ಡೌನ್ ಕಟ್ಟಡವನ್ನು ಸಂರಕ್ಷಣೆ ಮಾಡುವಂತೆ ಆದೇಶಿಸಿರುವುದು ನಮ್ಮ ಹೋರಾಟಕ್ಕೆ ಸಿಕ್ಕ ಜಯವಾಗಿದೆ. ಈಗಲಾದರೂ ಸಂಬಂಧಪಟ್ಟ ಇಲಾಖೆಯು ಅಧಿಕಾರಿಗಳು ಹಾಗು ಜನಪ್ರತಿನಿಧಿಗಳು ದೇವರಾಜ ಮಾರುಕಟ್ಟೆ ನವೀರಣಕ್ಕೆ ಮುಂದಾಗಬೇಕು ಎಂದು ದೇವರಾಜ ಮಾರುಕಟ್ಟೆ ಮಳಿಗೆದಾರರ ಸಂಘದ ಅಧ್ಯಕ್ಷ ಮಹದೇವು ಒತ್ತಾಯಿಸಿದ್ದಾರೆ.

ಮೈಸೂರಿನಲ್ಲಿ ಶಿಥಿಲಾವಸ್ಥೆಯಲ್ಲಿರುವ ಪಾರಂಪರಿಕ ಕಟ್ಟಡಗಳ ಸಂರಕ್ಷಣೆ ಮಾಡುವಂತೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದ ಹಿನ್ನೆಲೆ ಶುಕ್ರವಾರ ಮಾತನಾಡಿರುವ ಅವರು, ನ್ಯಾಯಾಲಯ ಕಡೆಗೂ ನ್ಯಾಯ ದೊರಕಿಸಿಕೊಟ್ಟಿದೆ. ಈಗಲಾದರೂ ಸರ್ಕಾರ ಹಂತ ಹಂತವಾಗಿ ದೇವರಾಜ ಮಾರುಕಟ್ಟೆ ನವೀಕರಣ ಕಾರ್ಯ ಮಾಡಬೇಕು ಎಂದರು.

ಮಾರುಕಟ್ಟೆಯ ಒಂದು ಭಾಗದ ಮುಖ್ಯದ್ವಾರದ ಕಟ್ಟಡವನ್ನು ಅತ್ಯಂತ ವ್ಯವಸ್ಥಿತವಾಗಿ ಅಧಿಕಾರಿ ವರ್ಗ ಕೆಡವಿ ಹಾಕಿತು. ಆ ಬಳಿಕ ಮಾರುಕಟ್ಟೆಯ ಇಡೀ ಕಟ್ಟಡ ಶಿಥಿಲವಾಗಿದೆ ಎಂಬ ನೆಪವೊಡ್ಡಿ ನೆಲಸಮ ಮಾಡುವ ಹುನ್ನಾರ ನಡೆಯಿತು. ಆದರೀಗ ಸುಪ್ರೀಂಕೋರ್ಟ್ ಸೂಕ್ತ ಆದೇಶ ನೀಡಿದೆ. ಈಗಲಾದರೂ ಸಂಬಂಧಪಟ್ಟ ಇಲಾಖೆ ದೇವರಾಜ ಮಾರುಕಟ್ಟೆ ನವೀರಣಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಏನದು ಕೋರ್ಟ್ ಆದೇಶ: ಮೈಸೂರಿನ ಪಾರಂಪರಿಕ ಕಟ್ಟಡಗಳಾದ ಲ್ಯಾನ್ಸ್ ಡೌನ್ ಬಿಲ್ಡಿಂಗ್ ಮತ್ತು ದೇವರಾಜ ಮಾರುಕಟ್ಟೆ ಪುನರ್ ನಿರ್ಮಾಣಕ್ಕೆ ಸುಪ್ರೀಂ ಕೋರ್ಟ್ ತಡೆ ನೀಡಿದ್ದು, ಕಟ್ಟಡಗಳ ಪಾರಂಪರಿಕತೆಗೆ ಧಕ್ಕೆಯಾಗದಂತೆ ಕಟ್ಟಡಗಳ ನವೀಕರಣ ಮಾಡುವಂತೆ ಆದೇಶಿಸಿದೆ. 14 ವರ್ಷಗಳ ಹಿಂದೆ ಲ್ಯಾನ್ಸ್ ಡೌನ್ ಬಿಲ್ಡಿಂಗ್ ನಲ್ಲಿರುವ ಒಂದು ಮಳಿಗೆಯ ಚಾವಣಿ ಕುಸಿದ ಪರಿಣಾಮ ಇಬ್ಬರು ಸಾವನ್ನಪ್ಪಿದ್ದರು. ಘಟನೆ ಬಳಿಕ ಕಟ್ಟಡದಲ್ಲಿದ್ದ ಎಲ್ಲಾ ಮಳಿಗೆದಾರರನ್ನು ಸರ್ಕಾರ ಖಾಲಿ ಮಾಡಿಸಿ, ಎದುರಿನ ಸ್ಥಳದಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿಕೊಟ್ಟಿತ್ತು. ಹಾಗೆಯೇ ಎಂಟು ವರ್ಷಗಳ ಹಿಂದೆ ದೇವರಾಜ ಮಾರುಕಟ್ಟೆ ಉತ್ತರ ದಿಕ್ಕಿನ ದ್ವಾರದಲ್ಲಿ ಸ್ವಾಗತ ಕಮಾನು ಕುಸಿದಿತ್ತು. ಇದರಿಂದ ಎರಡೂ ಕಟ್ಟಡ ಶೀಥಿಲಗೊಂಡಿದ್ದು, ಅವುಗಳನ್ನು ನೆಲಸಮ ಮಾಡಿ, ಅದೇ ಮಾದರಿಯಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಮುಂದಾಗಿತ್ತು.

ಇದನ್ನು ಪ್ರಶ್ನಿಸಿ ಕೆಲವರು ಸುಪ್ರಿಂಕೋರ್ಟ್ ಮೆಟ್ಟಿಲೇರಿದ್ದರು. ಬಳಿಕ ನ್ಯಾಯಾಲಯ ಎರಡೂ ಕಟ್ಟಡಗಳನ್ನು ಸಂರಕ್ಷಿಸಬಹುದೇ ಅಥವಾ ಪುನರ್ ನಿರ್ಮಾಣ ಮಾಡಬೇಕೆ ಎಂಬುದನ್ನು ತಿಳಿಯಲು ಐಐಟಿ ರೂರ್ಕಿ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿತ್ತು. ಅದರಂತೆ ಕಳೆದ ವರ್ಷ ಐಐಟಿ ರೂರ್ಕಿಯ ಉಮೇಶ್ ಕುಮಾರ್ ಶರ್ಮಾ ನೇತೃತ್ವದ ತಂಡ ಅವಳಿ ಕಟ್ಟಡವನ್ನು ತಾಂತ್ರಿಕವಾಗಿ ಪರಿಶೀಲನೆ ನಡೆಸಿತ್ತು. ಈ ವೇಳೆ ಕಟ್ಟಡದ ಗಾರೆಯ ಮಾದರಿ, ಅಡಿಪಾಯದ ಮಣ್ಣು, ಇಟ್ಟಿಯನ್ನು ಸಂಗ್ರಹಿಸಿಕೊಂಡು ತೆರಳಿತ್ತು.

ಬಳಿಕ ತನ್ನ ವರದಿಯನ್ನು ಸುಪ್ರಿಂಕೋ?????ಗೆ ಐಐಟಿ ರೂರ್ಕಿಯ ತಜ್ಞರ ತಂಡ ನೀಡಿತ್ತು. ಈ ವರದಿಯನ್ನು ಆಧರಿಸಿ ಅವಳಿ ಕಟ್ಟಡವನ್ನು ನವೀಕರಣ ಮಾಡಿ ಸಂರಕ್ಷಿಸುವಂತೆ ಆದೇಶಿಸಿದೆ.

## ಖಾಸಗಿ ಬಸ್‌ಗಳ ಸುರಕ್ಷತಾ ನಿಯಮ ಉಲ್ಲಂಘನೆ-ರೈತ ಸಂಘದ ಆರೋಪ



**ಬೆಳಗಾವಿ ವಾರ್ತೆ ಕೋಲಾರ:** ಸುರಕ್ಷತಾ ನಿಯಮ ಪಾಲಿಸದ ಖಾಸಗಿ ಸ್ಲೀಪರ್ ಬಸ್ಸುಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು ಅನಧಿಕೃತ ಶಾಲಾ ಕಾಲೇಜು ವಾಹನಗಳ ತಪಾಸಣೆಗೆ ವಿಶೇಷ ತಂಡ ರಚನೆ ಮಾಡಿ ಮಕ್ಕಳ ಭವಿಷ್ಯ ಪ್ರಯಾಣಿಕರ ಜೀವ ರಕ್ಷಿಸುವ ಜೊತೆಗೆ ಬಾರೀ ಟನ್ ತುಂಬುವ ಟಿಪ್ಪರ್ ಲಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳವಂತೆ ರೈತ ಸಂಘದಿಂದ ಆರ್.ಟಿ.ಓ ವೇಣುಗೋಪಾಲರೆಡ್ಡಿರಿಗೆ ಮನವಿ ನೀಡಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಮಾತನಾಡಿ, ರಾಜ್ಯದಲ್ಲಿ ಸಂಚರಿಸುವ ಖಾಸಗಿ ಸ್ಲೀಪರ್ ಕೋರ್ಟ್ ಹಾಗೂ ಹವಾ ನಿಯಂತ್ರಿತ ಬಸ್ಸುಗಳ ಪ್ರಯಾಣಿಕರ ಪಾಲಿಗೆ ಆರಾಮದಾಯಕ ಪ್ರಯಾಣದ ಆಸರೆಯಾಗಬೇಕೆ ಹೊರತು, ಅಗ್ನಿ ಕುಂಡಗಳಾಗಬಾರದು ಇದುವರೆವಿಗೂ ಸಂಭವಿಸಿರುವ ಬಸ್ಸಿನ ಅಗ್ನಿ ದುರಂತದ ಹೆಚ್ಚಿನ ಪ್ರಕರಣಗಳಲ್ಲಿ ಪ್ರಯಾಣಿಕರ ಪ್ರಾಣಕ್ಕೆ ಎರವಾಗಿರುವುದು ಸ್ಲೀಪರ್ ಬಸ್ಸುಗಳೇ ಎಂಬುದು ಗಮನಿಸಬೇಕಾದ ಅಂಶವಾಗಿದೆ.ರಾಜ್ಯದ ಶೇ.90ರಷ್ಟು ಸ್ಲೀಪರ್ ಬಸ್ಸುಗಳಲ್ಲಿ ಅಗ್ನಿ ಸುರಕ್ಷತಾ ಮಾನದಂಡ ಗೌಣವಾಗಿರುವುದು ಆತಂಕಕಾರಿಯಾಗಿದೆ, ಸಾರಿಗೆ ಇಲಾಖೆಯು ಸುರಕ್ಷತಾ ಮಾರ್ಗಸೂಚಿ ಅಳವಡಿಕೆಗೆ ಗಡವು ನೀಡಿದ್ದರೂ, ಕೆಲವು ಬಸ್ಸು ಮತ್ತು ಏಜೆಂಟ್ ಟ್ರಾವೆಲ್ಸ್ ಮಾಲೀಕರು ತೋರುತ್ತಿರುವ ನಿರ್ಲಕ್ಷತೆಯಿಂದ ಇತ್ತೀಚಿನ ವರ್ಷಗಳಲ್ಲಿ ಸಂಚಾರಿಸುವ ಖಾಸಗಿ ಬಸ್ಸುಗಳು ಪ್ರಯಾಣಿಕರಿಗೆ ಉಚಿತ ಶವಪೆಟ್ಟಿಗೆ ಕೊಡುವ ಬಸ್ಸುಗಳಾಗಿ ಮಾರ್ಪಟ್ಟಿದೆ ಎಂದು ಆರೋಪಿಸಿದರು.

ಬಸ್ಸು ಮಾಲೀಕರು ಲಾಭದ ಉದ್ದೇಶದಿಂದ ಸುರಕ್ಷತಾ ಮಾನದಂಡ ಗಾಳಿಗೆ ತೂರಿರುವುದು ಅವರ ಬೇಜವಾಬ್ದಾರಿತನಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಅಗ್ನಿಶಾಮಕ ಉಪಕರಣಗಳು ತುರ್ತು ನಿರ್ಗಮನ ಕಿಟಕಿಗಳು ಮತ್ತು ಸುಲಭವಾಗಿ ಹೊಡೆಯಬಹುದಾದ ಗಾಜುಗಳ ಅಳವಡಿಕೆಗೆ ವ್ಯಯಸುವ ಹಣಕ್ಕಿಂತ ಪ್ರಯಾಣಿಕರ ಜೀವನದ ಮೌಲ್ಯ ದೊಡ್ಡದೆಂದು ಅರಿಯಬೇಕು ಎಂದರು.ಈ ಹಿಂದೆ ನಡೆದ ಹಲವಾರು ಭೀಕರ ಅಗ್ನಿ ದುರಂತಗಳಲ್ಲಿ ಬೆಂಕಿಗಿಂತಲೂ ಹೆಚ್ಚಾಗಿ ಹೊಗೆ ಮತ್ತು ಉಸಿರು ಗಟ್ಟುವಿಕೆಯಿಂದಲೇ ಸಾರ್ವಜನಿಕರ ಸಾವಾಗಿದ್ದು ಕಿರಿದಾದ ಸೀಟುಗಳು, ಇಕ್ಕಟ್ಟಾದ ದಾರಿಗಳು, ಬೆಂಕಿ ಹೊತ್ತಿಕೊಂಡಾಗ ಸುಗಮವಾಗಿ ಹೊರಬರಲು ಸಾದ್ಯವಾಗದೆ, ಉಸಿರು ಗಟ್ಟಿ ಸಾವನ್ನಪ್ಪುತ್ತಿದ್ದರು. ಇಂಥಹ ಸಮಸ್ಯೆಗಳನ್ನು ಸಂಬಂಧ ಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸದೆ ಇರುವುದು ಕರ್ತವ್ಯ ನಿರ್ಲಕ್ಷತೆಯ ಪರಮಾವಧಿಯಾಗಿದೆ ಎಂದು ಕಿಡಿ ಕಾರಿದರು.

ಮನವಿ ಸ್ವೀಕರಿಸಿ ಮಾತನಾಡಿದ ಆರ್.ಟಿ.ಓ ವೇಣುಗೋಪಾಲರೆಡ್ಡಿ, ಅನಧಿಕೃತ ಖಾಸಗಿ ಬಸ್ಸುಗಳ ಮತ್ತು ಟ್ರಾವೆಲ್ಸ್ ಬಸ್ಸುಗಳ ವಿರುದ್ಧ ಕಾನೂನು ಕೈಗೊಳ್ಳುತ್ತಿದ್ದೇವೆ. ಜೊತೆಗೆ ಶಾಲಾ ವಾಹನಗಳ ಮಾಹಿತಿ ದಾಖಲೆಗಳು ನೀಡುವಂತೆ ಶಿಕ್ಷಣ ಇಲಾಖೆಗೆ ಪತ್ರ ಬರೆಯುತ್ತೇವೆ. ಕೂಡಲೇ ಕ್ರಮ ಕೈಗೊಂಡು ಸಮಸ್ಯೆಯನ್ನು ಬಗೆಹರಿಸುವ ಭರವಸೆ ನೀಡಿದರು.

## ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರ: ಚಾ.ನಗರದಲ್ಲಿ ಸಂಭ್ರಮಾಚರಣೆ

**ಬೆಳಗಾವಿ ವಾರ್ತೆ ಚಾಮರಾಜನಗರ:** ಪಶ್ಚಿಮ ಬಂಗಾಳದಲ್ಲಿ ಪ್ರಥಮ ಬಾರಿ ಬಿಜೆಪಿಗೆ ಭಾರಿ ಬಹುಮತದೊಂದಿಗೆ ಮುಖ್ಯಮಂತ್ರಿಯಾಗಿ ಸುವೇಂದ್ರ ಅಧಿಕಾರಿ ಪ್ರಮಾಣ ವಚನ ಸ್ವೀಕರಿಸುತ್ತಿದ್ದಂತೆ ಚಾಮರಾಜನಗರದಲ್ಲಿ ಹಿಂದು ಜಾಗೃತಿ ಸಮಿತಿಯಿಂದ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಸಮಿತಿಯ ಅಧ್ಯಕ್ಷ ಶ್ರೀಕಂಠಸ್ವಾಮಿ ನೇತೃತ್ವದಲ್ಲಿ ಜಮಾಯಿಸಿದ ಹಿಂದು ಜಾಗೃತಿ ಸಮಿತಿಯ ಕಾರ್ಯಕರ್ತರು ಮುಖಂಡರು ಬಿಜೆಪಿ, ಪ್ರಧಾನಿ ನರೇಂದ್ರ ಮೋದಿ, ಅಮಿತಾ ಶಾ ಹಾಗೂ ಮುಖ್ಯಮಂತ್ರಿ ಸುವೇಂದ್ರ ಅಧಿಕಾರಿ ಪರ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿಂದು ಜಾಗೃತಿ ಸಮಿತಿಯ ಅಧ್ಯಕ್ಷ ಶ್ರೀಕಂಠಸ್ವಾಮಿ ಮಾತನಾಡಿ, ಪಶ್ಚಿಮ ಬಂಗಾಳದಲ್ಲಿ ಹಿಂದುಗಳ ವಿರೋಧಿ ಮಮತಾ ಬ್ಯಾನರ್ಜಿಯ 15 ವರ್ಷಗಳ ಆಡಳಿತಕ್ಕೆ ಅಂತ್ಯ ಹಾಡಿ, ಪ್ರಚಂಡ ಬಹುಮತದಿಂದ ಬಿಜೆಪಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ.

ಸುವೇಂದ್ರ ಅಧಿಕಾರಿ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುತ್ತಿರುವುದು ದೇಶದ ಪ್ರತಿಯೊಬ್ಬ ಹಿಂದುಗಳಿಗೆ ಸಂತಸವನ್ನು ಉಂಟು ಮಾಡಿದೆ ಎಂದು ಹರ್ಷ ವ್ಯಕ್ತಪಡಿಸಿದರು.



ಬಂಗಾಳದೇಶದ ನುಸುಳಗೋರರನ್ನು ತಡೆಯುವ ಜೊತೆಗೆ ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಯುಗ ಆರಂಭವಾಗಿದೆ. ಬಿಜೆಪಿ ಸಂಸ್ಥಾಪಕರಾದ ಶ್ಯಾಂಪ್ರಕಾಶ್ ಮುಖರ್ಜಿ ಅವರ ಕನಸಿನಂತೆ ಬಿಜೆಪಿ ಅಧಿಕಾರ ಹಿಡಿಯುವ ಮೂಲಕ ಅವರ ಹೋರಾಟಕ್ಕೆ ಸಂದ ಜಯವಾಗಿದೆ. 22 ಕ್ಕು ಹೆಚ್ಚು ರಾಜ್ಯಗಳಲ್ಲಿ ಈಗಾಗಲೇ ಬಿಜೆಪಿ ಅಧಿಕಾರದಲ್ಲಿದೆ. ಮುಂದಿನ ದಿನಗಳಲ್ಲಿ ಕರ್ನಾಟಕ ಸೇರಿದಂತೆ ಇತರೇ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರ ಹಿಡಿಯಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001